ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 261 ₹ ಬೆಲೆ: 4 Sunday, 10, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಜೆಡಿಎಸ್ ಪಕ್ಷದಿಂದ ಸಿಎಂ ಇಬ್ರಾಹಿಂ ಉಚ್ಚಾಟನೆ ಅಧಿಕೃತ

ಬೆಂಗಳೂರು: ಜೆ.ಪಿ ಭವನದಲ್ಲಿ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ ದೇವೇಗೌಡರ ನೇತೃತ್ವದಲ್ಲಿ ನಡೆದ ಕಾರ್ಯಕಾರಿಣಿ ಸಭೆಯಲ್ಲಿ ಸಿ.ಎಂ ಇಬ್ರಾಹಿಂ ಅವರನ್ನು ಅಧಿಕೃತವಾಗಿ ಜೆಡಿಎಸ್ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ.

ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಒಮ್ಮತದ ತೀರ್ಮಾನ ಕೈಗೊಂಡು ಇಬ್ರಾಹಿಂ ಅವರನ್ನು ಉಚ್ಚಾಟನೆಗೊಳಿಸಲಾಗಿದೆ.

2024ರ ಲೋಕಸಭಾ ಚುನಾವಣೆಗೆ ಬಿಜೆಪಿ–ಜೆಡಿಎಸ್ ಮೈತ್ರಿ ಘೋಷಣೆಯಾದಾಗಿನಿಂದಲೂ ಇಬ್ರಾಹಿಂ ಅವರು ಪಕ್ಷದ ವಿರುದ್ಧ, ಪಕ್ಷದ ನಾಯಕರಾದ ದೇವೇಗೌಡ, ಕುಮಾರಸ್ವಾಮಿ ವಿರುದ್ಧ ಹೇಳಿಕೆ ನೀಡುತ್ತಿದ್ದಾರೆ. ಕೇರಳ ಸೇರಿದಂತೆ ವಿವಿಧ ಸಂಘಟನೆಗಳ ಜೊತೆ ಪಕ್ಷಕ್ಕೆ ವಿರುದ್ಧವಾಗಿ ಸಭೆ ಮಾಡಿದ್ದಾರೆ. ಅಲ್ಲದೇ ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆದುಹಾಕಿದ್ದರೂ ನಮ್ಮದೇ ಒರಿಜಿನಲ್ ಜೆಡಿಎಸ್ ಅಂತ ಪದೇ ಪದೇ ಹೇಳಿಕೊಂಡು ಬಂದಿದ್ದಾರೆ. ಈ ಎಲ್ಲ ಆರೋಪಗಳನ್ನು ಆಧಾರವಾಗಿಟ್ಟುಕೊಂಡು ಒಮ್ಮತದ ತೀರ್ಮಾನದೊಂದಿಗೆ ಇಬ್ರಾಹಿಂ ಅವರನ್ನು ಪಕ್ಷದಿಂದ ಉಚ್ಚಾಟನೆಗೊಳಿಸಲಾಗಿದೆ.

ಇಬ್ರಾಹಿಂ ಪಕ್ಷ ವಿರೋಧಿ ಚಟುವಟಿಕೆಗಳನ್ನು ಮಾಡುತ್ತಿದ್ದಾರೆ ಎಂದು ಇತ್ತೀಚೆಗೆ ಅವರನ್ನು ಅಮಾನತುಗೊಳಿಸಲಾಗಿತ್ತು. ಶನಿವಾರ ಪಕ್ಷದಿಂದ ಉಚ್ಚಾಟನೆಗೊಳಿಸಿರುವುದಾಗಿ ರಾಷ್ಟ್ರೀಯ ಅಧ್ಯಕ್ಷ ದೇವೇಗೌಡರು ಸಭೆಯ ಬಳಿಕ ತಿಳಿಸಿದ್ದಾರೆ.

ಜೆಡಿಎಸ್ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಹೆಚ್.ಡಿ ಕುಮಾರಸ್ವಾಮಿ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಜಫ್ರುಲ್ಲಾ ಖಾನ್, ಸಂಸದ ಪ್ರಜ್ವಲ್ ರೇವಣ್ಣ ಮಾತ್ರವಲ್ಲದೇ ಪಂಜಾಬ್, ಯುಪಿ, ಮಹಾರಾಷ್ಟ್ರ, ತಮಿಳುನಾಡು, ಗುಜರಾತ್, ಪಶ್ಚಿಮ ಬಂಗಾಳದ ಜೆಡಿಎಸ್ ರಾಜ್ಯಾಧ್ಯಕ್ಷರು, ಕಾರ್ಯಾಧ್ಯಕ್ಷರು ಭಾಗಿಯಾಗಿದ್ದರು.

ಇಸಿಸ್ ಉಗ್ರರೊಂದಿಗೆ ನಂಟು: ಬೆಂಗಳೂರಿನಲ್ಲಿ ಓರ್ವ ಶಂಕಿತ ಭಯೋತ್ಪಾದಕ ಸೇರಿ 13 ಮಂದಿ ಬಂಧನ

ನವದೆಹಲಿ/ಬೆಂಗಳೂರು: ಇಸಿಸ್ ಭಯೋತ್ಪಾದನೆ ಸಂಚು ಪ್ರಕರಣ ಸಂಬಂಧ ತನಿಖೆ ಮುಂದುವರಿಸಿರುವ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ಕರ್ನಾಟಕ ಮತ್ತು ಮಹಾರಾಷ್ಟ್ರದ 44 ಸ್ಥಳಗಳಲ್ಲಿ ದಾಳಿ ನಡೆಸಿದ್ದು, ದಾಳಿ ವೇಳೆ ಬೆಂಗಳೂರಿನಲ್ಲಿ ಓರ್ವ ಶಂಕಿತ ಉಗ್ರ ಸೇರಿ 13 ಮಂದಿಯನ್ನು ಬಂಧನಕ್ಕೊಳಪಡಿಸಿದೆ.

ಮಹಾರಾಷ್ಟ್ರ ಮತ್ತು ಕರ್ನಾಟಕದ ಪೊಲೀಸ್ ಪಡೆಗಳ ನೆರವಿನೊಂದಿಗೆ ಎನ್ಐಎ ಇಂದು ದಾಳಿ ನಡೆಸಿದೆ ಎಂದು ಮೂಲಗಳು ತಿಳಿಸಿವೆ.

ಬೆಳಿಗ್ಗೆಯಿಂದಲೇ ಎನ್ಐಎ ಕರ್ನಾಟಕದ 1 ಪ್ರದೇಶ, ಪುಣೆಯ 2, ಥಾಣೆ ಗ್ರಾಮಾಂತರದಲ್ಲಿ 31, ಥಾಣೆ ನಗರದಲ್ಲಿ ಒಂಬತ್ತು ಮತ್ತು ಭಾಯಂದರ್‌ನಲ್ಲಿ ಒಂದು ಪ್ರದೇಶದ ಮೇಲೆ ದಾಳಿ ನಡೆ, ಶೋಧ ಕಾರ್ಯಾಚರಣೆ ನಡೆಸಿದ್ದಾರೆ.

ಬೆಂಗಳೂರಿನ ಪುಲಿಕೇಶಿನಗರ ವ್ಯಾಪ್ತಿಯಲ್ಲಿ ವಾಸವಾಗಿದ್ದ ಆಲಿ ಅಬ್ಬಾಸ್ ಪೇಟಿವಾಲ ಎಂಬಾತನನ್ನು ಎನ್ಐಎ ವಶಕ್ಕೆ ಪಡೆದಿದೆ.

ಐಸಿಸ್‌ನೊಂದಿಗೆ ಸಂಪರ್ಕ ಹೊಂದಿರುವ ಮುಂಬೈ ಮೂಲದ ಅಲಿ ಅಬ್ಬಾಸ್ ಕಳೆದ ನಾಲ್ಕು

ವರ್ಷಗಳ ಹಿಂದೆ ಬೆಂಗಳೂರಿಗೆ ಬಂದು ನೆಲೆಸಿದ್ದಾನೆ. ಬೆಂಗಳೂರಿಗೆ ಬರುವ ಮೊದಲು ಪುಣೆಯಲ್ಲಿ ನೆಲೆಸಿದ್ದ. ಅನಂತರ ಪುಣೆಯಿಂದ ಬೆಂಗಳೂರಿಗೆ ಬಂದು ನೆಲೆಸಿದ್ದ. ಬೆಂಗಳೂರಿನಲ್ಲಿದ್ದುಕೊಂಡು ದೇಶದ ನಾನಾ ಭಾಗಗಳಿಗೆ ಸಂಚರಿಸುತ್ತಿದ್ದ. ಅಲಿ ಅಬ್ಬಾಸ್ ಹಾಗೂ ಅಲಿ ಪತ್ನಿ ಮೂವರು ಮಕ್ಕಳು ಹೊಂದಿದ್ದಾರೆಂದು ವರದಿಗಳು ತಿಳಿಸಿವೆ.

ಈತ ಒಂದು ವರ್ಷದ ಹಿಂದೆ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದ. ಕೋವಿಡ್ ಸಂದರ್ಭದಲ್ಲಿ ಕೆಲಸ ಬಿಟ್ಟಿದ್ದ. ಪತ್ನಿ ನ್ಯೂಟ್ರಿಕೇರ್ ಆಸ್ಪತ್ರೆ ನಡೆಸುತ್ತಿದ್ದಾಳೆ. ಈ ನಡುವೆ ಕೆಲಸ ಬಿಟ್ಟು ಸ್ಥಳೀಯವಾಗಿ ವಾಟ್ಸಪ್ ಗ್ರೂಪ್ ಮಾಡಿಕೊಂಡು ಇತರರನ್ನು ಆಡ್ ಮಾಡಿದ್ದಾನೆ. ಗ್ರೂಪ್‌ನಲ್ಲಿ ತನ್ನ ವಿಚಾರ ಒಪ್ಪುವ, ತನ್ನ ಪರವಾಗಿ ಮಾತನಾಡುವವರನ್ನು ಬೇರೊಂದು ಗ್ರುಪ್‌ಗೆ ಆಡ್ ಮಾಡುತ್ತಿದ್ದ.

ಹೀಗೆ ಸ್ಥಳೀಯವಾಗಿ ವಾಟ್ಸಪ್, ಟೆಲಿಗ್ರಾಂ ಹಲವು ಗ್ರುಪ್ ಗಳನ್ನು ಮಾಡಿದ್ದ ಈತನ ತನ್ನ ವಿಚಾರ ಒಪ್ಪುವವರಿಗೆಲ್ಲ ಬೇರೊಂದು ಗ್ರುಪ್ ಮಾಡಿ ಅದರಲ್ಲಿ ಪ್ರಚೋದನೆ ನೀಡುವ ಹೇಳಿಕೆ ಕಳುಹಿಸುತ್ತಿದ್ದ.

ಸ್ಥಳೀಯವಾಗಿ ತೀರಾ ಹತ್ತಿರದವರಿಗೆ ವಾಟ್ಸಪ್ ಯೂಸ್ ಮಾಡದಂತೆ ಹೇಳುತ್ತಿದ್ದ. ವಾಟ್ಸಪ್‌ಗಿಂತ ಟೆಲಿಗ್ರಾಂ ಸುರಕ್ಷಿತ. ಅದನ್ನೇ ಬಳಸುವಂತೆ ಸೂಚನೆ ನೀಡುತ್ತಿದ್ದ. ಸದ್ಯ ಈತನ್ನು ಎನ್ ಐಎ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದು, ಈತನ ಬಗ್ಗೆ ಮತ್ತಷ್ಟು ಮಾಹಿತಿ ಹೊರಬರುವ ಸಾಧ್ಯತೆಗಳಿವೆ.

ಭಾರತದಲ್ಲಿ ಭಯೋತ್ಪಾದನೆ ಮತ್ತು ಹಿಂಸಾಚಾರವನ್ನು ಹರಡುವ ಭಯೋತ್ಪಾದಕ ಸಂಘಟನೆಯ ಯೋಜನೆಗಳನ್ನು ವಿಫಲಗೊಳಿಸಲು ಎನ್ಐಎ ವ್ಯಾಪಕ ತನಿಖೆ ನಡೆಸುತ್ತಿದೆ.

ತಮಿಳುನಾಡು: ಪ್ರವಾಹ ಸಂತ್ರಸ್ತರಿಗೆ 6,000 ರೂ. ಹಣಕಾಸಿನ ನೆರವು ಘೋಷಿಸಿದ ಸಿಎಂ ಸ್ಟಾಲಿನ್

ತಮಿಳುನಾಡು: ಮೈಚಾಂಗ್ ಚಂಡಮಾರುತದ ಹೊಡೆತಕ್ಕೆ ಸಿಲುಕಿ ತಮಿಳುನಾಡು ತತ್ತರಿಸಿದೆ. ರಾಜಧಾನಿ ಚೆನ್ನೈ, ತಿರುವಳ್ಳೂರು, ಕಾಂಚೀಪುರಂ ಮತ್ತು ಚೆಂಗಲ್‌ಪೇಟ್ ಮತ್ತಿತರ ಪ್ರದೇಶಗಳು ತೀವ್ರ ಪ್ರವಾಹವನ್ನು ಎದುರಿಸುತ್ತಿದೆ.

ಸದ್ಯ ಮಳೆ ನಿಂತಿದ್ದರೂ ಹಲವು ಪ್ರದೇಶಗಳು ಜಲಾವೃತವಾಗಿದ್ದು, ದೈನಂದಿನ ಜನಜೀವನದ ಮೇಲೆ ಅಪಾರ ಪರಿಣಾಮ ಬೀರಿದ್ದು, ಶಾಲಾ– ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ಈ ಮಧ್ಯೆ ಪ್ರವಾಹ ಪೀಡಿತ ಸಂತ್ರಸ್ತರಿಗೆ ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ರೂ. 6,000 ಹಣಕಾಸಿನ ನೆರವು ಘೋಷಿಸಿದ್ದಾರೆ.

ಚಂಡಮಾರುತದಿಂದ ಜೀವನೋಪಾಯಕ್ಕೆ ತೊಂದರೆಯಾದ ಜನರಿಗೆ ಆರ್ಥಿಕ ನೆರವನ್ನು ಪಡಿತರ ಅಂಗಡಿಗಳಲ್ಲಿ ನಗದು ರೂಪದಲ್ಲಿ ಪಾವತಿಸಲಾಗುವುದು ಎಂದು ಸರ್ಕಾರ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ. ಅಲ್ಲದೆ, ಇತರ ವರ್ಗಗಳ ಅಡಿಯಲ್ಲಿ ಪರಿಹಾರವನ್ನು ಹೆಚ್ಚಿಸಲಾಗುವುದು ಎಂದು ಹೇಳಿದೆ.

ಹೃದಯಾಘಾತಕ್ಕೆ ಬಲಿಯಾದ 24 ವರ್ಷದ ನಟಿ

ಬೆಂಗಳೂರು: ಮಲಯಾಳಂ ನಟಿ ಲಕ್ಷ್ಮಿಕಾ ಸಂಜೀವನ್ ನಿನ್ನೆ ಹೃದಯಾಘಾತಕ್ಕೆ ತುತ್ತಾಗಿ ನಿಧನರಾಗಿದ್ದಾರೆ. 24 ವರ್ಷದ ಅವರು ಯುನೈಟೆಡ್ ಅರಬ್ ಎಮಿರೇಟ್ಸ್ ಶಾರ್ಜಾದಲ್ಲಿ ಕೊನೆಯುಸಿರೆಳೆದಿದ್ದಾರೆ. ಲಕ್ಷ್ಮಿಕಾ ಸಂಜೀವನ್ ಇನ್ಸ್ಟಾಗ್ರಾಂನಲ್ಲಿ ಕೊನೆಯದಾಗಿ ನವೆಂಬರ್2 ರಂದು ಪೋಸ್ಟ್ ಹಂಚಿಕೊಂಡಿದ್ದರು. ಸೂರ್ಯಾಸ್ತದ ಸುಂದರವಾದ ಚಿತ್ರವನ್ನು ಶೇರ್ ಮಾಡಿದ್ದರು. ಆದರೀಗ ನಿನ್ನೆ ಅವರು ಹೃದಯಾಘಾತಕ್ಕೆ ಕೊನೆಯುಸಿರೆಳೆದಿದ್ದಾರೆ. ಲಕ್ಷ್ಮಿಕಾ ಸಂಜೀವನ್ ಅವರು ಪಂಚವರ್ಣತಥಾ, ಸೌದಿ ವೆಲ್ಲಕ್ಕ, ಪೂಜ್ಯಮ್ಮ, ಉಯರೆ, ಒರು ಕುಟ್ಟನಾಡನ್ ಬ್ಲಾಗ್, ನಿತ್ಯಹರಿತ ನಾಯಗನ್ ಹೀಗೆ ಅನೇಕ ಸಿನಿಮಾಗಳಲ್ಲಿ ಈ ನಟಿ ನಟಿಸಿದ್ದಾರೆ. ಆದರೆ ಇವರ ಹಠಾತ್ ಸಾವು ಮಾಲಿವುಡ್ಗೆ ಅಘಾತ ನೀಡಿದೆ.

ಮಣ್ಣಲ್ಲಿ ಮಣ್ಣಾದ ಕನ್ನಡದ ಹಿರಿಯ ನಟಿ ಲೀಲಾವತಿ

ನೆಲಮಂಗಲ: ಸಕಲ ಸರ್ಕಾರಿ ಗೌರವಗಳೊಂದಿಗೆ ಕನ್ನಡದ ಹಿರಿಯ ನಟಿ ಲೀಲಾವತಿ ಅವರ ಅಂತ್ಯಕ್ರಿಯೆ ನೆರವೇರಿದೆ.

ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ 85 ವರ್ಷದ ಲೀಲಾವತಿ ಅವರು ನಿನ್ನೆ ನಿಧನರಾಗಿದ್ದರು. ನೆಲಮಂಗಲದ ಸೋಲದೇವನಹಳ್ಳಿಯ ತೋಟದಲ್ಲಿ ಹಿಂದೂ ಸಂಪ್ರದಾಯದಂತೆ ಅಂತ್ಯಕ್ರಿಯೆ ನೆರವೇರಿತು. ಪುತ್ರ ವಿನೋದ್ ರಾಜ್ ಅವರು ಅಂತಿಮ ವಿಧಿ–ವಿಧಾನಗಳನ್ನು ನೆರವೇರಿಸಿದರು.

ಸುಮಾರು 600ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದ ಲೀಲಾವತಿ ಅವರ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕಾಗಿ ನೆಲಮಂಗಲದ ಅಂಬೇಡ್ಕರ್ ಮೈದಾನದಲ್ಲಿ ವ್ಯವಸ್ಥೆ ಮಾಡಲಾಗಿತ್ತು. ಕಲಾವಿದರೂ, ರಾಜಕಾರಣಿಗಳು ಹಾಗೂ ಸಾವಿರಾರೂ ಅಭಿಮಾನಿಗಳು ಅಂತಿಮ ದರ್ಶನ ಪಡೆದರು.

ಲೀಲಾವತಿಯವರ ಹೆಸರು ಶಾಶ್ವತವಾಗಿ ಉಳಿಯಲು ಸರ್ಕಾರ ಮಟ್ಟದಲ್ಲಿ ಚರ್ಚಿಸಿ

ತೀರ್ಮಾನ: ಡಿ ಕೆ ಶಿ

ಬೆಂಗಳೂರು: ಹಿರಿಯ ನಟಿ ಲೀಲಾವತಿಯವರು ಕಷ್ಟಗಳನ್ನು ದಿಟ್ಟತನದಿಂದ ಎದುರಿಸಿ ಪರೋಪಕಾರ, ಸಮಾಜಸೇವೆ, ಕೃಷಿ ಚಟುವಟಿಕೆ ಮಾಡಿ ಮಾದರಿಯಾದವರು ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಹೇಳಿದ್ದಾರೆ. ಲೀಲಾವತಿ ಹೆಸರು ಶಾಶ್ವತವಾಗಿ ಉಳಿಸಲು ಕ್ರಮ: ಲೀಲಾವತಿಯವರ ಹೆಸರು ಕನ್ನಡ ನಾಡಿನಲ್ಲಿ, ಚಿತ್ರರಂಗದಲ್ಲಿ ಶಾಶ್ವತವಾಗಿ ಉಳಿಯಲು ಏನು ಮಾಡಬೇಕೋ ಅದನ್ನು ನಮ್ಮ ಸರ್ಕಾರ ಮಾಡುತ್ತದೆ. ಈಗ ಹೇಳುವುದಿಲ್ಲ. ನಾವೆಲ್ಲರೂ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ ಎಂದರು.

ನಟಿ ಲೀಲಾವತಿ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕನ್ನಡ ಚಿತ್ರರಂಗದಲ್ಲಿ ಬಹುಕಾಲ ಛಾಪು ಮೂಡಿಸಿದ್ದ ಹಿರಿಯ ನಟಿ ಲೀಲಾವತಿ ಅವರು ನಿನ್ನೆ ಸಂಜೆ ವಯೋಸಹಜ ಕಾಯಿಲೆಯಿಂದ ಕೊನೆಯುಸಿರೆಳೆದರು. ನೆಲಮಂಗಲದ ಅಂಬೇಡ್ಕರ್ ಮೈದಾನದಲ್ಲಿ ಅಂತಿಮ ದರ್ಶನಕ್ಕಾಗಿ ವ್ಯವಸ್ಥೆ ಮಾಡಲಾಗಿತ್ತು. ಇದೀಗ ಅಂಬೇಡ್ಕರ್ ಮೈದಾನದಿಂದ ಲೀಲಾವತಿ ಅವರ ಪಾರ್ಥಿವ ಶರೀರವನ್ನು ರವೀಂದ್ರ ಕಲಾಕ್ಷೇತ್ರದಲ್ಲಿ ಅಂತಿಮ ದರ್ಶನಕ್ಕೆ ಇಡಲಾಗಿದ್ದು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ, ನಟಿಯರಾದ ಸುಧಾರಾಣಿ, ಮಾಳವಿಕಾ ಸೇರಿದಂತೆ ಇನ್ನಿತರರು ಅಂತಿಮ ದರ್ಶನ ಪಡೆದುಕೊಂಡರು.

ತಪ್ಪು ಮಾಹಿತಿ: ಕಾಂಗ್ರೆಸ್ ಶಾಸಕಿ ಕನೀಜ್ ಫಾತಿಮಾಗೆ ಕರ್ನಾಟಕ ಹೈಕೋರ್ಟ್ ನೋಟಿಸ್

ಬೆಂಗಳೂರು: ಚುನಾವಣಾ ಆಯೋಗಕ್ಕೆ ಸಲ್ಲಿಸಿದ ಅಫಿಡವಿಟ್‌ನಲ್ಲಿ ಆಸ್ತಿ ವಿವರ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಅವರ ಆಯ್ಕೆಯನ್ನು ಪ್ರಶ್ನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕಿ ಕನೀಜ್ ಫಾತಿಮಾ ಅವರಿಗೆ ಕರ್ನಾಟಕ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.

ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಫಾತಿಮಾ ಅವರು ಈ ವರ್ಷ ಮೇನಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕಲಬುರಗಿ ಉತ್ತರ ಕ್ಷೇತ್ರದಿಂದ ಶಾಸಕಿಯಾಗಿ ಆಯ್ಕೆಯಾಗಿದ್ದರು.

ಈ ಸಂಬಂಧ ಜೆಡಿಯು ಅಭ್ಯರ್ಥಿಯಾಗಿ ಸ್ಪರ್ಧಿಸಿ ಸೋತಿದ್ದ ಎಎಸ್ ಶರಣಬಸಪ್ಪ ಸಲ್ಲಿಸಿರುವ ಚುನಾವಣಾ ತಕರಾರು ಅರ್ಜಿಯನ್ನು ಶುಕ್ರವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ಏಕಸದಸ್ಯ ನ್ಯಾಯಪೀಠ, ಫಾತಿಮಾ ಅವರಿಗೆ ನೋಟಿಸ್ ಜಾರಿ ಮಾಡಿತು ಮತ್ತು ಆಕ್ಷೇಪಣೆ ಸಲ್ಲಿಸಲು ಪ್ರತಿವಾದಿಗೆ ಅವಕಾಶ ನೀಡಿ ವಿಚಾರಣೆಯನ್ನು ನಾಲ್ಕು ವಾರಗಳ ಕಾಲ ಮುಂದೂಡಿತು.

ಅರ್ಜಿಯಲ್ಲಿ ಏನಿದೆ? '2023ರ ಮೇ 10ರಂದು ನಡೆದ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಕನೀಜ್ ಫಾತಿಮಾ ಅವರು ಕಾಂಗ್ರೆಸ್ ಅಭ್ಯರ್ಥಿಯಾಗಿ ಕಲಬುರಗಿ ಉತ್ತರ ಕ್ಷೇತ್ರದಿಂದ ಸ್ಪರ್ಧಿಸಿ, ಗೆಲುವು ಸಾಧಿಸಿದ್ದಾರೆ. ಈ ವೇಳೆ ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ತಮ್ಮ ಆಸ್ತಿ ವಿವರ ಹಾಗೂ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಸರಿಯಾದ ಮಾಹಿತಿಗಳನ್ನು ನೀಡಿಲ್ಲ. ಉದ್ದೇಶಪೂರ್ವಕವಾಗಿಯೇ ಅವರು ಸತ್ಯವನ್ನು ಮರೆಮಾಚಿದ್ದು, ಇದು ಚುನಾವಣೆಯ ಫಲಿತಾಂಶಗ ಮೇಲೆ ಪರಿಣಾಮ ಬೀರಿದೆ' ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಫಾತಿಮಾ ಅವರು ಎಸ್‌ಬಿಐ ಸ್ಟೇಷನ್ ಬ್ರಾಂಚ್‌ನಲ್ಲಿರುವ ತಮ್ಮ ತನ್ನ ಬ್ಯಾಂಕ್ ಖಾತೆಯ ವಿವರಗಳನ್ನು ಬಹಿರಂಗಪಡಿಸಿಲ್ಲ. ಫಾತಿಮಾ ಅವರು 2018 ರಲ್ಲಿ 14.5 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿಯನ್ನು ಘೋಷಿಸಿದ್ದರು. ಆದರೆ, ಐದು ವರ್ಷಗಳ ನಂತರವೂ ಅದರ ಮೌಲ್ಯ ಕೇವಲ 14.64 ಕೋಟಿ ರೂ. ಗಳಷ್ಟಿದೆ. 'ಇದು ಸಹ ಸ್ವೀಕಾರಾರ್ಹವಲ್ಲ'. ಇದು ಜನಪ್ರತಿನಿಧಿಗಳ ಕಾಯ್ದೆಯ ಉಲ್ಲಂಘನೆಯಾಗಿದ್ದು, ಇವರ ಆಯ್ಕೆಯನ್ನು ಅನೂರ್ಜಿತಗೊಳಿಸಿ ಇವರ ಸಮೀಪದ ಪ್ರತಿಸ್ಪರ್ಧಿಯಾಗಿ ಎರಡನೇ ಅತಿಹೆಚ್ಚು ಮತ ಪಡೆದ ಅಭ್ಯರ್ಥಿಯನ್ನು ವಿಜಯಿ ಎಂದು ಘೋಷಿಸಬೇಕು' ಎಂದು ಅರ್ಜಿದಾರರು ಕೋರಿದ್ದಾರೆ.

ಡಸ್ಟ್ ಬಿನ್‌ನಲ್ಲಿ ನವಜಾತ ಶಿಶುವಿನ ಶವ ಪತ್ತೆ

ಮುಂಬೈ: ವಾಣಿಜ್ಯ ನಗರಿ ಮುಂಬೈನ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿನ ಕಸದ ತೊಟ್ಟಿಯಲ್ಲಿ ನವಜಾತ ಶಿಶುವಿನ ಶವ ಪತ್ತೆಯಾಗಿದೆ.

ಸಿಯಾನ್ ಆಸ್ಪತ್ರೆ ಎಂದೇ ಜನಪ್ರಿಯವಾಗಿರುವ ಲೋಕಮಾನ್ಯ ತಿಲಕ್ ಮುನ್ಸಿಪಲ್ ಜನರಲ್ ಆಸ್ಪತ್ರೆಯ ವಾಶ್ ರೂಂ ನ ಡಸ್ಟ್‌ಬಿನ್‌ನಲ್ಲಿ ನವಜಾತ ಶಿಶುವಿನ ಶವವೊಂದನ್ನು ಕಸ ಗುಡಿಸುವವರೊಬ್ಬರು ಪತ್ತೆ ಮಾಡಿದ್ದಾರೆ. ನಂತರ ಅದರ ಬಗ್ಗೆ ಕರ್ತವ್ಯ ನಿರತ ವೈದ್ಯರಿಗೆ ಮಾಹಿತಿ ನೀಡಿದ್ದಾಗಿ ಪೊಲೀಸರು ತಿಳಿಸಿದ್ದಾರೆ.

ವೈದ್ಯರು ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಈ ಸಂಬಂಧ ಅಪರಿಚಿತ ಮಹಿಳೆಯ ವಿರುದ್ಧ ಭಾರತೀಯ ದಂಡ ಸಂಹಿತೆ ಸೆಕ್ಷನ್ 317ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಸಿಯಾನ್ ಪೊಲೀಸ್ ಠಾಣೆಯ ಅಧಿಕಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿ ಪಡೆಯಲು ಪೊಲೀಸರು ಆಸ್ಪತ್ರೆಯಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ ಎಂದು ಅವರು ಹೇಳಿದರು.

ಮಂಗಳೂರು: 6 ಲಕ್ಷ ರೂ. ಮೌಲ್ಯದ ಡ್ರಗ್ಸ್ ವಶಕ್ಕೆ

ಮಂಗಳೂರು: ನಗರದಲ್ಲಿ ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ನಿಷೇಧಿತ ಮಾದಕ ವಸ್ತುವನ್ನು ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ಇಬ್ಬರನ್ನು ಬಂಧಿಸಿರುವ ಇಲ್ಲಿನ ಕೇಂದ್ರ ಅಪರಾಧ ವಿಭಾಗದ ಪೊಲೀಸರು, ಅವರ ಬಳಿಯಿದ್ದ 6 ಲಕ್ಷ ರೂ. ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಪೊಲೀಸರು ನಗರದ ಕದ್ರಿ ಪಾರ್ಕ್‌ನಲ್ಲಿ ದಾಳಿ ನಡೆಸಿ ಇಬ್ಬರು ಆರೋಪಿಗಳಿಂದ ಮಾದಕ ವಸ್ತುವನ್ನು ವಶಪಡಿಸಿಕೊಂಡಿದ್ದಾರೆ.

ಬಂಧಿತರನ್ನು ಕೇರಳದ ಕಾಸರಗೋಡ

ಡಿ.15ರ ವರೆಗೆ ಬೆಳಗಾವಿ ಕೋಟೆ ಕೆರೆಯಲ್ಲಿ ಜಲ ಸಾಹಸ ಕ್ರೀಡಾ ಯೋಜನೆ

ಬೆಳಗಾವಿ: ಬೆಳಗಾವಿಯ ಕೋಟೆ ಕೆರೆಯಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ವತಿಯಿಂದ ಜಲ ಸಾಹಸ ಕ್ರೀಡೆಗಳನ್ನು ಆಯೋಜಿಸಲಾಗಿದೆ.

ವಿಧಾನಮಂಡಳ ಚಳಿಗಾಲ ಅಧಿವೇಶನ ಮುಕ್ತಾಯದವರೆಗೆ(ಡಿ.15 ವರೆಗೆ) ಶಾಲಾ ಮಕ್ಕಳಿಗೆ ಉಚಿತ ಪ್ರವೇಶವಿರುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ವೇಶ್ಯಾವಾಟಿಕೆ ಅಡ್ಡೆ ಮೇಲೆ ಪೊಲೀಸರ ದಾಳಿ: ಮೂವರ ಬಂಧನ

ಕುಣಿಗಲ್: ವೇಶ್ಯಾವಾಟಿಕೆ ನಡೆಸುತ್ತಿದ್ದ ಅಡ್ಡೆ ಮೇಲೆ ಪೊಲೀಸರು ದಾಳಿ ನಡೆಸಿದ್ದು, ಮೂವರನ್ನು ಬಂಧಿಸಿದ್ದಾರೆ.

ಪಟ್ಟಣದ ಕೆಆರ್‌ಎಸ್ ಅಗ್ರಹಾರ ಹೊಸಬಡವಣೆ, ಬಾಲಕರ ವಸತಿ ನಿಲಯ ಸಮೀಪದಲ್ಲಿ ಈ ಘಟನೆ ನಡೆದಿದೆ.

ತುಮಕೂರು ತಾಲೂಕು ಹೆಬ್ಬೂರು ಹೋಬಳಿ, ಜಲ್ಲಿಪಾಳ್ಯ ಗ್ರಾಮದ ಅಂದಾನಯ್ಯ ಸೇರಿದಂತೆ ಇಬ್ಬರು ಮಹಿಳೆಯರನ್ನು ಪೊಲೀಸರು ಬಂಧಿಸಿದ್ದಾರೆ.

ಅಂದಾನಯ್ಯ ಬಾಲಕರ ವಸತಿ ಗೃಹ ಸಮೀಪ ಮನೆಯೊಂದನ್ನು ಬಾಡಿಗೆ ಪಡೆದು ಇಬ್ಬರು ಮಹಿಳೆಯರನ್ನು ಇಟ್ಟುಕೊಂಡು ವೇಶ್ಯಾವಾಟಿಕೆ ನಡೆಸುತ್ತಿದ್ದಾನೆ ಎಂಬ ಖಚಿತ ಮಾಹಿತಿ ಮೇರೆಗೆ ಸಿಪಿಐ ನವೀನ್‌ಗೌಡ ನೇತೃತ್ವದ ಪೊಲೀಸರ ತಂಡ ದಾಳಿ ನಡೆಸಿ, ಅಂದಾನಯ್ಯ ಹಾಗೂ ಇಬ್ಬರು ಮಹಿಳೆಯರನ್ನು ಬಂಧಿಸಿದ್ದಾರೆ

ಫಕೀರರ ವೇಷದಲ್ಲಿ ಅಮಾಯಕರನ್ನ ಮೋಸ ಮಾಡ್ತಿದ್ದ ಯುವಕರು ವಶಕ್ಕೆ

ಉತ್ತರ ಕನ್ನಡ: ಫಕೀರರ ವೇಷದಲ್ಲಿ ಅಮಾಯಕರನ್ನು ಮೋಸ ಮಾಡುತ್ತಿದ್ದ ಯುವಕರನ್ನು ಹಿಡಿದ ಗ್ರಾಮಸ್ಥರು, ಪೊಲೀಸರಿಗೆ ಒಪ್ಪಿಸಿದ ಘಟನೆ ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯ ಗಾಂಧಿನಗರದಲ್ಲಿ ನಡೆದಿದೆ.

ಬಂಧಿತರು ಆರೋಪಿಗಳು ಮುಂಬೈ ಮೂಲದ ಯುವಕರಾದ ಅರುಣ್ ಹಾಗೂ ವಿಷ್ಣು ಆಗಿದ್ದು, ಇವರು ಮನೆ ಮನೆ ತಿರುಗಾಡುತ್ತಾ ಜನರನ್ನು ಮೋಸ ಮಾಡುತ್ತಿದ್ದರೆಂಬ ಆರೋಪ ಕೇಳಿಬಂದಿದೆ. ಒಂದಿಬ್ಬರು ಇರುತ್ತಿದ್ದ ಮನೆಗಳನ್ನು ಗುರುತು ಮಾಡಿಕೊಂಡು, ಸಮಸ್ಯೆಗಳನ್ನು ಹೇಳಿಕೊಂಡು ಜನರಿಂದ ಹಣ ಕೀಳಲಾರಂಭಿಸಿದ್ದರಂತೆ. ಸಂಶಯಗೊಂಡು ವಿಚಾರಣೆ ಮಾಡಿದಾಗ ಖದೀಮರು ಬಾಯಿ ಬಿಟ್ಟಿದ್ದಾರೆ. ಕೂಡಲೇ ದಾಂಡೇಲಿ ಪೊಲೀಸರಿಗೆ ಗ್ರಾಮಸ್ಥರು ಒಪ್ಪಿಸಿದ್ದಾರೆ.

ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳದ ನೀಡಿದ ಇಬ್ಬರು ಶಿಕ್ಷಕರು ಅಮಾನತು

ಶಿವಮೊಗ್ಗ: ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ಮತ್ತು ಕರ್ತವ್ಯ ಲೋಪ ಎಸಗಿದ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಶಿಕಾರಿಪುರ ತಾಲೂಕಿನ ಸೊಪ್ಪಿನಕೇರಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಇಬ್ಬರು ಶಿಕ್ಷಕರನ್ನು ಅಮಾನತುಗೊಳಿಸಿ ಡಿಡಿಪಿಐ ಪರಮೇಶ್ವರಪ್ಪ ಆದೇಶ ಹೊರಡಿಸಿದ್ದಾರೆ.

ಶಾಲೆಯ ಮುಖ್ಯ ಶಿಕ್ಷಕ ನಾಗರಾಜ್ ಕೋರಿ, ಸಹ ಶಿಕ್ಷಕ ಶಾಂತಕುಮಾರ್ ಅಮಾನತುಗೊಂಡಿದ್ದಾರೆ. ಶಿಕ್ಷಕ ಶಾಂತಕುಮಾರ್ ವಿರುದ್ಧ ಲೈಂಗಿಕ ಕಿರುಕುಳ ಆರೋಪ ಕೇಳಿಬಂದಿತ್ತು. ಪ್ರಕರಣದ ಬಗ್ಗೆ ದೂರು ನೀಡಿದರೂ ಗಂಭೀರವಾಗಿ ಪರಿಗಣಿಸದೇ ಕರ್ತವ್ಯ ಲೋಪ ಎಸಗಿದ್ದಾರೆ ಎಂಬ ಆಪಾದನೆಯಿಂದಾಗಿ ಮುಖ್ಯ ಶಿಕ್ಷಕರನ್ನು ಅಮಾನತು ಮಾಡಲಾಗಿದೆ. ಬಿಇಒ ಪ್ರಕರಣದ ಸತ್ಯಾಸತ್ಯತೆಯನ್ನು ಪರಿಶೀಲಿಸಿ ಡಿಡಿಪಿಐ ಅವರಿಗೆ ವರದಿ ನೀಡಿದ್ದಾರೆ. ಇದರ ಆಧಾರದ ಮೇಲೆ ಕ್ರಮಕೈಗೊಳ್ಳಲಾಗಿದೆ.

ಪ್ರಧಾನಿ ಮೋದಿಯವರ ಹಠದಿಂದಾಗಿ, ಬಿಜೆಪಿಯೇತರ ರಾಜ್ಯಗಳಿಗೆ ಅನ್ಯಾಯ: ಎಎಪಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು

ವಿಜಯನಗರ: ರಾಜ್ಯದಲ್ಲಿ ಬಿಜೆಪಿಯ 25 ಸಂಸದರಿದ್ದರೂ ರಾಜ್ಯಕ್ಕೆ ಬರಬೇಕಿರುವ ಜಿಎಸ್‌ಟಿ ಪಾಲನ್ನು ಕೇಳುತ್ತಿಲ್ಲ. ಬರ ಪರಿಹಾರಕ್ಕೆ ಒತ್ತಾಯ ಮಾಡುತ್ತಿಲ್ಲ. ಬಿಜೆಪಿ ಸರ್ಕಾರವಿರುವ ರಾಜ್ಯಗಳಿಗೆ ಹಣ ನೀಡಲಾಗುತ್ತಿದೆ. ಬಿಜೆಪಿಯೇತರ ರಾಜ್ಯಗಳನ್ನು ಹತ್ತಿಕ್ಕುವ ಪ್ರಯತ್ನವಾಗುತ್ತಿದೆ. ಮೋದಿಯವರ ಹಠದಿಂದಾಗಿ ಬಿಜೆಪಿಯೇತರ ರಾಜ್ಯಗಳಿಗೆ ಅನ್ಯಾಯವಾಗುತ್ತಿದೆ ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಹೇಳಿದರು

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಲ್ಲಿ ಸದನ ಆರಂಭವಾಗಿ ಮೂರು ದಿನ ಕಳೆದರೂ ಹಿಂದುಳಿದ ಭಾಗಗಳ ಕುರಿತು ಚರ್ಚೆಯಾಗಿಲ್ಲ. ಶೇ 40ರಷ್ಟು ಭ್ರಷ್ಟಾಚಾರವನ್ನು ಮುಂದಿಟ್ಟುಕೊಂಡು, ಎಎಪಿಯ ಯೋಜನೆಗಳು ಕದ್ದು ಕಾಂಗ್ರೆಸ್ ಅಧಿಕಾರಕ್ಕೇರಿದೆ. ಅವರ ಗ್ಯಾರಂಟಿ ಯೋಜನೆಗಳು ಯಾರಿಗೂ ತಲುಪುತ್ತಿಲ್ಲ. ಏಳು ತಿಂಗಳೂ ಕಳೆದರೂ ಖಾತರಿಗಳನ್ನು ಸಂಪೂರ್ಣವಾಗಿ ಅನುಷ್ಠಾನಕ್ಕೆ ತರಲು ಸಾಧ್ಯವಾಗಿಲ್ಲ. ಬರದಿಂದಾಗಿ ರಾಜ್ಯದಲ್ಲಿ ಪರಿಸ್ಥಿತಿ ಹದಗೆಟ್ಟಿದ್ದರೂ, ಸರ್ಕಾರ ಆದ್ಯತೆಯ ಮೇರೆಗೆ ಪರಿಹಾರ ಕಂಡುಕೊಂಡಿಲ್ಲ ಎಂದು ದೂರಿದರು.

ರಾಜ್ಯದಲ್ಲಿ ಕಾಂಗ್ರೆಸ್‌ಗೆ ವಿರೋಧ ಪಕ್ಷವೇ ಇಲ್ಲ. ಸದನದಲ್ಲಿ ಬರ ಪರಿಸ್ಥಿತಿಯನ್ನು ಚರ್ಚೆಗೆ ತೆಗೆದುಕೊಳ್ಳಲು ಬಿಜೆಪಿ ನಾಯಕರೇ ಅವಕಾಶ ನೀಡಿಲ್ಲ. ಭ್ರಷ್ಟರಹಿತ ಸರ್ಕಾರ ನೀಡುತ್ತೇವೆ ಎಂದು ಮೋದಿ ಹೇಳುತ್ತಾರೆ. ಆದರೆ, ಅದೇ ಭ್ರಷ್ಟಾಚಾರದಿಂದಲೇ ಕೆಎಸ್ ಈಶ್ವರಪ್ಪ ರಾಜೀನಾಮೆ ನೀಡಿದರು. ಮಾಡಾಳ್ ವಿರೂಪಾಕ್ಷಪ್ಪ ಸಿಕ್ಕಿಬಿದ್ದರು. ಕುಟುಂಬ ರಾಜಕಾರಣದಿಂದ ದೇಶ ಅಭಿವೃದ್ಧಿಯಾಗಲ್ಲ ಎಂದು ಮೋದಿ ಹೇಳುತ್ತಾರೆ ಆದರೆ, ಯಡಿಯೂರಪ್ಪನವರ ಕುಟುಂಬ ರಾಜಕಾರಣಕ್ಕೆ ಅವಕಾಶ ನೀಡಲಾಗಿದೆ ಎಂದು ದೂರಿದರು.

ಕಾಂಗ್ರೆಸ್ ಕೂಡ ಇದರಿಂದ ಹೊರತಾಗಿಲ್ಲ. ಪ್ರಜಾಪ್ರಭುತ್ವವನ್ನು ಹತ್ತಿಕ್ಕಲಾಗುತ್ತಿದೆ. ಕೇಂದ್ರದ ತನಿಖಾ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ. ಸರ್ಕಾರ ರೈತರ ವಿಚಾರದಲ್ಲಿ ಗಮನಹರಿಸಬೇಕು.

ಕಬ್ಬು ಬೆಳೆಗಾರರಿಗೆ ಸರಿಯಾದ ಬೆಂಬಲ ಬೆಲೆ ಸಿಗುತ್ತಿಲ್ಲ. ರೈತರಿಗೆ ಕರೆಂಟ್ ಕೊಡುತ್ತಿಲ್ಲ. ಈ ಎಲ್ಲಾ ಸಮಸ್ಯೆಗಳನ್ನು ಜನರ ಮುಂದಿಡಲೆಂದೇ ಹಳ್ಳಿ ಹಳ್ಳಿಗಳಿಗೆ ತೆರಳುತ್ತಿದ್ದೇವೆ. ಕಳೆದ 70 ವರ್ಷಗಳಿಂದ ಆಳಿದ ಪಕ್ಷಗಳಿಗೆ ಪರ್ಯಾಯವಾಗಿರುವುದು ಎಎಪಿ. ಇದನ್ನು ಸಾರ್ವಜನಿಕರ ಗಮನಕ್ಕೆ ತರುತ್ತಿದ್ದೇವೆ ಎಂದರು.

ಈ ಎಲ್ಲಾ ಸಮಸ್ಯೆಗಳನ್ನು ಜನರ ಮುಂದಿಟ್ಟು, ನಮಗೂ ಒಂದು ಅವಕಾಶ ಕೊಡಿ ಎಂದು ಕೇಳುತ್ತಿದ್ದೇವೆ.

ಜಾತಿ ರಾಜಕಾರಣ, ಕುಟುಂಬ ರಾಜಕಾರಣವನ್ನು ಧಿಕ್ಕರಿಸಿ ಎಎಪಿಗೆ ಅವಕಾಶ ನೀಡಿ ಎಂದು ಜನರನ್ನು ಕೇಳುತ್ತೇವೆ. ಪ್ರತಿ ಜಿಲ್ಲೆಯಲ್ಲೂ, ತಾಲ್ಲೂಕಿನ ಹಳ್ಳಿಗಳಲ್ಲಿ ಅರಳಿಕಟ್ಟೆ; ಬನ್ನಿ ಮಾತನಾಡೋಣ ಕಾರ್ಯಕ್ರಮ ನಡೆಸುತ್ತಿದ್ದೇವೆ.

ಹಳ್ಳಿಗಳಲ್ಲಿ ಶಿಕ್ಷಣದ ಗುಣಮಟ್ಟ ಸರಿಯಾಗಿದೆಯಾ?. ಆರೋಗ್ಯದ ವ್ಯವಸ್ಥೆ, ರೈತರ ಶ್ರಮಕ್ಕೆ ಬೆಲೆ, ಯುವಕರಿಗೆ ಅವಕಾಶ, ಮಹಿಳೆಯರಿಗೆ ಸಮಾನ ಹಕ್ಕು, ಭ್ರಷ್ಟಾಚಾರ ನಿರ್ಮೂಲನೆ, ಕುಟುಂಬ ರಾಜಕಾರಣ ನಿರ್ಮೂಲನೆಯ ವಿಚಾರಗಳನ್ನಿಟ್ಟುಕೊಂಡು ನಾವು ಹಳ್ಳಿ ಹಳ್ಳಿಗೆ ತೆರಳುತ್ತಿದ್ದೇವೆ ಎಂದರು.

ಬಿಜೆಪಿ ನಾಯಕ ಗೂಳಿಹಟ್ಟಿ ಶೇಖರ್ ಅವರಿಗೆ ಆಗಿರುವುದು ತಪ್ಪು. ಈ ಘಟನೆಯು ಸರಿಯಲ್ಲ. ಅವರ ಜಾತಿಯನ್ನು ಕೇಳಿ ಆಹ್ವಾನವಿಲ್ಲ ಎಂದು ಹೇಳಿದ್ದರೆ ತಪ್ಪು. ಇಂತಹ ವ್ಯವಸ್ಥೆಯ ವಿರುದ್ಧ ಸಾರ್ವಜನಿಕರಿಗೆ ಅರಿವು ಮೂಡಿಸುವುದೇ ನಮ್ಮ ಕೆಲಸ ಎಂದು ಹೇಳಿದರು.

ಮುಂದಿನ ಜಿಲ್ಲಾ ಮತ್ತು ತಾಲ್ಲೂಕು ಚುನಾವಣೆಯಲ್ಲಿ ನಾವು ಪ್ರಯತ್ನ ಮಾಡುತ್ತೇವೆ. ಸಂಸತ್ತಿನ ಚುನಾವಣೆಗೆ ರಾಷ್ಟ್ರ ಮಟ್ಟದ ನಾಯಕರ ನಿರ್ಧಾರಕ್ಕೆ ಬದ್ಧರಾಗಿರುತ್ತೇವೆ.

ಮುಂದಿನ ಏಳರಿಂದ ಎಂಟು ತಿಂಗಳಲ್ಲಿ ರಾಜ್ಯದಾದ್ಯಂತ ಪ್ರವಾಸ ಮಾಡುತ್ತೇವೆ. ಕಳೆದ ವಿಧಾನಸಭೆಯಲ್ಲಿ ಹೆಚ್ಚಿನ ಜನರನ್ನು ಪಕ್ಷದಿಂದ ನಿಲ್ಲಿಸಲಾಗಿತ್ತು. ಉಚಿತ ಯೋಜನೆಗಳಿಂದ ದೇಶ ಅಭಿವೃದ್ಧಿಯಾಗಲ್ಲ ಎಂದು ಪ್ರಧಾನಿ ಹೇಳಿದರು. ಆದರೆ, ಪಂಚರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿಯೇ ಉಚಿತಗಳನ್ನು ಘೋಷಿಸಿದೆ. ಮಹುವಾ ಮೊಯಿತ್ರಾ ಅವರನ್ನು ಉಚ್ಚಾಟನೆ ಮಾಡಿರುವುದು ಬಿಜೆಪಿಯ ಉದ್ದೇಶಪೂರ್ವಕ ಕೃತ್ಯವಾಗಿದ್ದು, ಅದು ಸರಿಯಲ್ಲ.

1930ರಲ್ಲಿ ಜಾತಿ ಗಣತಿ ನಡೆದಿತ್ತು. ಇದಾದ ನಂತರ ಭಾರತದಲ್ಲಿ ಈವರೆಗೂ ಜಾತಿ ಗಣತಿಯಾಗಿಲ್ಲ. ಜಾತಿಗಣತಿಯಿಂದ ಎಲ್ಲಾ ಜನಾಂಗಕ್ಕೂ ಮೀಸಲಾತಿ ನೀಡಲು ಸಾಧ್ಯ. ವೈಜ್ಞಾನಿಕವಾಗಿ ಜಾತಿಗಣತಿ ನಡೆಸಿ. ಸಿದ್ದರಾಮಯ್ಯ ಅವರು 2013ರಲ್ಲಿ ಜಾತಿಗಣತಿ ವರದಿಯನ್ನು ಸ್ವೀಕರಿಸಲಿಲ್ಲ.

ಆನಂತರ ಬಂದ ಯಾವುದೇ ಮುಖ್ಯಮಂತ್ರಿಗಳು ವರದಿಯನ್ನು ಸ್ವೀಕರಿಸಲಿಲ್ಲ. ಜಾತಿಗಣತಿ ಸ್ವೀಕಾರಕ್ಕೆ ಸಿದ್ದರಾಮಯ್ಯ ಇದೀಗ ನೆಪ ಹೇಳುತ್ತಿದ್ದಾರೆ. ಜಾತಿಗಣತಿಯನ್ನು ಅಂಗೀಕರಿಸಬೇಕು. ಇಡೀ ದೇಶದಲ್ಲಿಯೇ ಜಾತಿಗಣತಿ ಕಡ್ಡಾಯವಾಗಿ ಆಗಬೇಕು. ಜಾತಿಗಣತಿ ಆಧಾರದ ಮೇಲೆ ಮೀಸಲಾತಿ ನೀಡಬೇಕು. ಜಾತಿಗಣತಿ ಸ್ವೀಕರಿಸದಿದ್ದರೆ ನಾವು ಉಗ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದರು.

ಥಂಡಿಗಾಳಿ ಬೀಸೋಕೆ ಶುರುವಾಗಿದೆ, ಆರೋಗ್ಯ ಕಾಪಾಡೋಕೆ ಬೆಲ್ಲದ ಬಳಕೆ ಹೆಚ್ಚು ಮಾಡಿ..

ಚಳಿಗಾಲದಲ್ಲಿ ದೇಹ ಬೆಚ್ಚಗಾಗಿಡುವುದರ ಜೊತೆಗೆ ಆರೋಗ್ಯದ ಕಡೆಗೂ ಗಮನ ಹರಿಸಬೇಕಾಗುತ್ತದೆ. ಆಹಾರದ ಬಗ್ಗೆ ಪ್ರಮುಖವಾಗಿ ಕಾಳಜಿ ವಹಿಸುವುದು ಅತೀ ಅಗತ್ಯ. ನಾವು ಸೇವಿಸುವ ಆಹಾರ ನಮ್ಮ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಹಾಗಾದರೆ ಚಳಿಗಾಲದಲ್ಲಿ ಹೇಗೆ ಯಾವ ವಸ್ತುವನ್ನು ತಿನ್ನಬೇಕು ಎಂದು ನೋಡೋಣ.

ಬೆಲ್ಲ ಯಾರಿಗೆ ತಾನೇ ಇಷ್ಟ ಇಲ್ಲ ಹೇಳಿ. ಪ್ರತಿಯೊಬ್ಬರೂ ಇಷ್ಟಪಡುವ ಬೆಲ್ಲ ಆರೋಗ್ಯದ ದೃಷ್ಟಿಯಿಂದಲೂ ಅತೀ ಉತ್ತಮವಾದುದು. ಚಳಿಗಾಲದಲ್ಲಿ ಬೆಲ್ಲ ಸೇವಿಸುವುದರಿಂದ ಅನೇಕ ಲಾಭಗಳಿವೆ. ಬೆಲ್ಲವನ್ನು ಬಿಸಿ ಆಹಾರ ಪದಾರ್ಥವೆಂದು ಪರಿಗಣಿಸಲಾಗುತ್ತದೆ.

ಚಳಿಗಾಲದಲ್ಲಿ ಬೆಲ್ಲ ತಿನ್ನುವುದು ಆರೋಗ್ಯದ ವಿಚಾರದಲ್ಲಿ ಒಳ್ಳೆಯ ಅಂಶವಾಗಿದೆ. ಆಮ್ಲ ಪುಡಿಯನ್ನು ಬೆಲ್ಲದೊಂದಿಗೆ ಸೇರಿಸಿ ಸೇವಿಸುವುದರಿಂದ ಆರೋಗ್ಯ ವೃದ್ಧಿಗೆ ಉತ್ತಮವಾಗುತ್ತದೆ. ಬೆಲ್ಲದೊಂದಿಗೆ ತಾಜಾ ಆಮ್ಲ ಸೇವಿಸಬಹುದು. ಇದರ ಸಿಹಿ ಹುಳಿ ರುಚಿ ದೇಹದ ಆರೋಗ್ಯ ವೃದ್ಧಿಸುವುದರ ಜೊತೆಗೆ ರೋಗನಿರೋಧಕ ಶಕ್ತಿಯನ್ನೂ ಹೆಚ್ಚಿಸುತ್ತದೆ.

ಮುಖ್ಯವಾಗಿ ಚಳಿಗಾಲದಲ್ಲಿ ಬೆಲ್ಲವನ್ನು ಜೇನುತುಪ್ಪದೊಂದಿಗೆ ಬೆರೆಸಿ ಸೇವಿಸಿದರೆ ರೋಗನಿರೋಧಕ

ಶಕ್ತಿ ಹೆಚ್ಚಾಗುತ್ತದೆ. ಹಿಮೋಗ್ಲೋಬಿನ್ ಹೆಚ್ಚುವಿಕೆಗೂ ಸಹಕಾರಿಯಾಗುತ್ತದೆ. ಚಳಿಗಾಲದಲ್ಲಿ ದೇಹವನ್ನು ಬೆಚ್ಚಗಾಗಿ ಇರಿಸಿಕೊಳ್ಳಲು ಬೆಲ್ಲದ ಚಹಾ ಸೇವಿಸಬಹುದು. ಇದಕ್ಕೆ ತುಳಸಿ ಎಲೆ ಬಳಸಿದರೆ ರಕ್ತ ಶುದ್ಧವಾಗುವ ಜೊತೆಗೆ ಅಲರ್ಜಿಯಂತಹ ಖಾಯಿಲೆ ದೂರವಾಗುತ್ತದೆ.

ಚಳಿಗಾಲದಲ್ಲಿ ಜೀರ್ಣದ ಸಮಸ್ಯೆ ಹೆಚ್ಚಾಗಿ ಕಾಡುತ್ತದೆ. ಇದಕ್ಕೆ ತುಪ್ಪದೊಂದಿಗೆ ಬೆಲ್ಲವನ್ನು ಬೆರೆಸಿ ತಿನ್ನುವುದು ಉತ್ತಮ ಔಷಧ. ಜೀರ್ಣಕ್ರಿಯೆ ಹೆಚ್ಚುವಂತೆ ಮಾಡುತ್ತದೆ. ಮಲಬದ್ಧತೆಯನ್ನು ಹೋಗಲಾಡಿಸುತ್ತದೆ. ರಾತ್ರಿ ಹೊತ್ತು ಹಾಲಿಗೆ ಬೆಲ್ಲ ಮತ್ತು ಚಿಟಿಕೆ ಅರಶಿನಪುಡಿ ಬೆರೆಸಿ ಕುಡಿದರೆ ಹೊಟ್ಟೆಯ ಉರಿಯೂತ ಕಡಿಮೆಯಾಗುತ್ತದೆ. ಉಸಿರಾಟ,ಶೀತದ ತೊಂದರೆಯೂ ಕಡಿಮೆಯಾಗುತ್ತದೆ.

ಚಳಿಗಾಲದಲ್ಲಿ ಪ್ರತಿದಿನ ಸೇವಿಸಬೇಕು ಈ ಡ್ರೈಫ್ರೂಟ್; ಕಾರಣ ಗೊತ್ತಾ ?

ಚಳಿಗಾಲದಲ್ಲಿ ಡ್ರೈಫ್ರೂಟ್‌ಗಳನ್ನು ನಿಯಮಿತವಾಗಿ ಸೇವನೆ ಮಾಡಬೇಕು. ಅನೇಕರು ಡ್ರೈಫ್ರೂಟ್ ಹಲ್ವಾವನ್ನು ಇಷ್ಟಪಡುತ್ತಾರೆ. ಇನ್ನೂ ಬೇರೆ ಬೇರೆ ವಿಧಾನಗಳನ್ನು ಅವುಗಳನ್ನು ನಾವು ಸೇವಿಸುತ್ತೇವೆ. ಚಳಿಗಾಲದಲ್ಲಿ ಡ್ರೈಫ್ರೂಟ್ ತಿನ್ನುವುದರಿಂದ ದೇಹವು ಬೆಚ್ಚಗಿರುತ್ತದೆ.

ಡ್ರೈಫ್ರೂಟ್‌ಗಳಲ್ಲಿ ಖರ್ಜೂರಕ್ಕೆ ಮೊದಲ ಸ್ಥಾನ. ಆದರೆ ಚಳಿಗಾಲದಲ್ಲಿ ಇದನ್ನು ತಿನ್ನಬೇಕೆ ಅಥವಾ ಬೇಡವೇ ಎಂಬುದು ಅನೇಕರಲ್ಲಿರುವ ಗೊಂದಲ.ಚಳಿಗಾಲದಲ್ಲಿ ಖರ್ಜೂರವನ್ನು ಸೇವಿಸುವುದರಿಂದ ದೇಹಕ್ಕೆ ಏನೆಲ್ಲಾ ಪ್ರಯೋಜನಗಳು ಸಿಗುತ್ತವೆ ಎಂಬುದನ್ನು ನೋಡೋಣ. ಇದು ಅನೇಕ ರೋಗಗಳನ್ನು ಕೂಡ ನಿಯಂತ್ರಿಸಬಲ್ಲದು. ಚಳಿಗಾಲ ಶುರುವಾಗುತ್ತಿದ್ದಂತೆಯೇ ಮಾರುಕಟ್ಟೆಯಲ್ಲಿ ಖರ್ಜೂರದ ಭರಾಟೆ ಕೂಡ ಜೋರಾಗಿರುತ್ತದೆ.

ಅಧಿಕ ರಕ್ತದೊತ್ತಡನಿಯಂತ್ರಣ ಚಳಿಗಾಲದಲ್ಲಿ ಕಡಿಮೆ ತಾಪಮಾನದಿಂದಾಗಿ ರಕ್ತನಾಳಗಳು ತಾತ್ಕಾಲಿಕವಾಗಿ ಕುಗ್ಗುತ್ತವೆ. ಇದರಿಂದ ದೇಹಕ್ಕೆ ಸರಿಯಾಗಿ ರಕ್ತ ಪೂರೈಕೆಯಾಗುವುದಿಲ್ಲ. ಅಂತಹ ಪರಿಸ್ಥಿತಿಯಲ್ಲಿ ರಕ್ತದೊತ್ತಡ ಹೆಚ್ಚಾಗುತ್ತದೆ. ಚಳಿಗಾಲದಲ್ಲಿ ಅಧಿಕ ಬಿಪಿಯನ್ನು ನಿಯಂತ್ರಿಸಲು ಖರ್ಜೂರವನ್ನು ಪ್ರತಿದಿನ ಸೇವಿಸಿ. ಏಕೆಂದರೆ ಖರ್ಜೂರದಲ್ಲಿ ಪೊಟ್ಯಾಸಿಯಮ್ ಸಮೃದ್ಧವಾಗಿದೆ.

ಮಧುಮೇಹ ನಿಯಂತ್ರಣ: ಕೆಲವರಿಗೆ ಚಳಿಗಾಲದಲ್ಲಿ

ಸಿಹಿತಿಂಡಿಗಳನ್ನು ತಿನ್ನಬೇಕೆಂಬ ತೀವ್ರ ಹಂಬಲವಿರುತ್ತದೆ. ಆದರೆ ಅದರಿಂದ ಶುಗರ್ ಲೆವೆಲ್ ಹೆಚ್ಚಾಗುವ ಅಪಾಯವಿರುತ್ತದೆ. ಸಕ್ಕರೆ ಕಾಯಿಲೆ ಇರುವವರು ಸಿಹಿ ತಿನ್ನಲು ಭಯಪಡುತ್ತಾರೆ. ಆದರೆ ಮಧುಮೇಹಿಗಳು ಕೂಡ ಖರ್ಜೂರವನ್ನು ಪ್ರತಿದಿನ ಮಿತವಾಗಿ ಸೇವನೆ ಮಾಡಬಹುದು. ಅದರಲ್ಲಿ ಗ್ಲೈಸೆಮಿಕ್ ಸೂಚ್ಯಂಕವು ತುಂಬಾ ಕಡಿಮೆಯಿರುವುದರಿಂದ ಅವರಿಗೂ ಪ್ರಯೋಜನಕಾರಿಯಾಗಿದೆ.

ಶೀತ ಮತ್ತು ಕೆಮ್ಮಿನಿಂದ ರಕ್ಷಣೆ: ಚಳಿಗಾಲದಲ್ಲಿ ಪ್ರತಿನಿತ್ಯ ಖರ್ಜೂರವನ್ನು ಹಾಲಿನೊಂದಿಗೆ ಸೇವಿಸಿದರೆ ಶೀತ ಮತ್ತು ಕೆಮ್ಮು ಕಡಿಮೆಯಾಗುತ್ತದೆ. ಈ ಋತುವಿನಲ್ಲಿ ಹೆಚ್ಚಿನ ಜನರು ನೆಗಡಿ ಮತ್ತು ಕೆಮ್ಮಿನಿಂದ ಬಳಲುತ್ತಾರೆ. ಖರ್ಜೂರದಲ್ಲಿರುವ ಪೋಷಕಾಂಶಗಳು ನಮ್ಮ ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತವೆ.

ನಮ್ಮ ರಸ್ತೆ ಕಾರ್ಯಾಗಾರಕ್ಕೆ ಬಿಬಿಎಂಪಿ ಚಾಲನೆ: ಸಲಹೆ ನೀಡುವಂತೆ ಸಾರ್ವಜನಿಕರಿಗೆ ಆಹ್ವಾನ

ಬೆಂಗಳೂರು: ಬೆಂಗಳೂರಿನ ಬಿಬಿಎಂಪಿ ಕೇಂದ್ರ ಕಚೇರಿಯ ಡಾ.ರಾಜ್‌ಕುಮಾರ್ ಗಾಜಿನ ಮನೆಯಲ್ಲಿ ನಡೆದ ನಮ್ಮ ರಸ್ತೆ ಪ್ರದರ್ಶನ, ಕಾರ್ಯಾಗಾರಕ್ಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಶುಕ್ರವಾರ ಚಾಲನೆ ನೀಡಿದರು.

ಬ್ಲೂಮ್‌ಬರ್ಗ್ ಫಿಲಾಂತ್ರಪಿಸ್ ಇನೀಶಿಯೇಟಿವ್ ಹಾಗೂ ಡಬ್ಲ್ಯುಆರ್‌ಐ ಇಂಡಿಯಾ ಸಹಭಾಗಿತ್ವದಲ್ಲಿ 2 ದಿನಗಳ ಕಾಲ ಬಿಬಿಎಂಪಿ ಕೇಂದ್ರ ಕಚೇರಿ ಡಾ.ರಾಜ್‌ಕುಮಾರ್ ಗಾಜಿನ ಮನೆಯಲ್ಲಿ ನಡೆದ ನಮ್ಮ ರಸ್ತೆ (ನಮ್ಮ ಬೀದಿಗಳು) ಪ್ರದರ್ಶನ ಕಾರ್ಯಾಗಾರ

ಉದ್ಯೋಗಿಗೆ ವಂಚಿಸಿ ವಿದೇಶಕ್ಕೆ ಹಾರಿದ್ದ ಸಾಫ್ಟ್ ವೇರ್ ಎಂಜಿನಿಯರ್ ಸೆರೆ

ಬೆಂಗಳೂರು: ವಿವಾಹ ಆಗುವುದಾಗಿ ನಂಬಿಸಿ ಬೆಂಗಳೂರಿನ ಪ್ರತಿಷ್ಠಿತ ಖಾಸಗಿ ಕಂಪನಿಯ ಮಹಿಳಾ ಉದ್ಯೋಗಿಯೊಂದಿಗೆ ದೈಹಿಕ ಸಂಪರ್ಕ ಬೆಳೆಸಿ, ವಂಚಿಸಿ ಕೋರ್ಟ್‌ಗೂ ಹಾಜರಾಗದೇ ಅಬುದಾಬಿಯಲ್ಲಿ ತಲೆಮರೆಸಿಕೊಂಡಿದ್ದ ಸಾಫ್ಟ್ ವೇರ್ ಎಂಜಿನಿಯರ್‌ನನ್ನು ಮಹದೇವಪುರ ಪೊಲೀಸರು ಬಂಧಿಸಿದ್ದಾರೆ.

ಕೇರಳದ ಕಣ್ಣೂರು ಮೂಲದ ಮಿಧುನ್ ಚಂದ್ರನ್ (32) ಬಂಧಿತ. ಈತನ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಸಹ ಜಾರಿಗೊಳಿಸಲಾಗಿತ್ತು. ಮಿಧುನ್ ಚಂದ್ರನ್ ಬೆಂಗಳೂರಿನಲ್ಲಿ ವ್ಯಾಸಂಗ ಮಾಡಿ ವೈಟ್ ಫೀಲ್ಡ್‌ನಲ್ಲಿರುವ ಕಂಪನಿಯೊಂದರಲ್ಲಿ ಸಾಫ್ಟ್ ವೇರ್ ಎಂಜಿನಿಯರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದ.

2016ರಲ್ಲಿ ಅದೇ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ 30 ವರ್ಷದ ಮಹಿಳೆಯನ್ನು ವಿವಾಹವಾಗುವುದಾಗಿ ನಂಬಿಸಿದ್ದ. ಬಿಟಿಎಂ ಲೇಔಟ್‌ನಲ್ಲಿದ್ದ ಮನೆಗೆ ಮಹಿಳೆಯನ್ನು ಕರೆ ದೊಯ್ದು ಬಲವಂತವಾಗಿ ದೈಹಿಕ ಸಂಬಂಧ ಬೆಳೆಸಿದ್ದ.

ಷರತ್ತು ಬದ್ದ ಜಾಮೀನು ಪಡೆದಿದ್ದ: ಆರೋಪಿಯ ತಾಯಿಯೂ ಮಗನ ಜೊತೆ ಮದುವೆ ಮಾಡಿ ಸುವುದಾಗಿ ದೂರುದಾರ ಮಹಿಳೆಗೆ ಆಶ್ವಾಸನೆ ಕೊಟ್ಟು ಆತನಿಗೆ ಹಣದ ಸಹಾಯ ನೀಡುವಂತೆ ಕೋರಿದ್ದರು.

ಬಳಿಕ ವರಸೆ ಬದಲಿಸಿದ ಮಿಧುನ್ ಚಂದ್ರನ್ ಮಹಿಳೆಯನ್ನು ವಿವಾಹವಾಗಲು ಒಪ್ಪದೇ, ಅವಾಚ್ಯ ಶಬ್ದಗಳಿಂದ ನಿಂದಿಸಿ ಮಾನಸಿಕ, ದೈಹಿಕ ಹಿಂಸೆ ನೀಡಿ ಪ್ರಾಣ ಬೆದರಿಕೆ ಹಾಕಿದ್ದ. 2020 ಫೆಬ್ರುವರಿಯಲ್ಲಿ ಈ ಬಗ್ಗೆ ಮಹದೇವಪುರ ಠಾಣೆಗೆ ಸಂತ್ರಸ್ತೆ ದೂರು ನೀಡಿದ್ದಳು.



ಇದರ ಬೆನ್ನಲ್ಲೇ ಆರೋಪಿ ಮಿಧುನ್ ಚಂದ್ರನ್ ನ್ಯಾಯಾಲಯದಿಂದ ಷರತ್ತು ಬದ್ದ ಜಾಮೀನು ಪಡೆದಿದ್ದ. ನಂತರ ಅಬುದಾಬಿಗೆ ತೆರಳಿ ಅಲ್ಲಿ ಕೆಲಸ ನಿರ್ವಹಿಸುತ್ತಿದ್ದ.

ಆರೋಪಿ ಸಿಕ್ಕಿ ಬಿದ್ದಿದ್ದು ಹೇಗೆ ?: ಇತ್ತ ಪ್ರಕರಣದ ತನಿಖೆ ನಡೆಸಿದ ಪೊಲೀಸರು ಆರೋಪಿಯ ವಿರುದ್ಧ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಚಾರ್ಜ್‌ಶೀಟ್ ಸಲ್ಲಿಕೆಯಾದ ಬಳಿಕ ಆರೋಪಿಯು ನ್ಯಾಯಾಲಯಕ್ಕೆ ಹಾಜರಾಗದೇ ತಲೆಮರೆಸಿಕೊಂಡಿದ್ದ. ಆಗ ನ್ಯಾಯಾಲಯವು ಆತನಿಗೆ ಸಮನ್ಸ್ ಜಾರಿ ಮಾಡಿತ್ತು. ಇದಕ್ಕೂ ಆರೋಪಿ ಪ್ರತಿಕ್ರಿಯಿಸದಿದ್ದಾಗ ಜಾಮೀನು ರಹಿತ ವಾರೆಂಟ್ ಜಾರಿ ಮಾಡಲಾಗಿತ್ತು. ಇಷ್ಟಾದರೂ ನ್ಯಾಯಾಲಯದತ್ತ ಮುಖ ಮಾಡದಿದ್ದಾಗ ಆರೋಪಿಯ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಹೊರಡಿಸಲಾಗಿತ್ತು. ಆತ ವಿದೇಶಕ್ಕೆ ತೆರಳಿರುವುದನ್ನು ಅರಿತ ಮಹದೇವಪುರ ಪೊಲೀಸರು ಸಿಬಿಐ ಮೂಲಕ ಇಂಟರ್‌ಪೋಲ್‌ಗೆ ಮಾಹಿತಿ ನೀಡಿದ್ದರು. 20 ದಿನಗಳ ಹಿಂದೆ ಆರೋಪಿಯು ಯಾವುದೋ ದಾಖಲೆಗಾಗಿ ಅಬುದಾಬಿಯ ರಾಯಭಾರ ಕಚೇರಿಗೆ ಹೋಗಿದ್ದ. ಆ ವೇಳೆ ಆತನ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಇರುವುದು ಪತ್ತೆಯಾಗಿತ್ತು. ಕೂಡಲೇ ಇಂಟರ್‌ಪೋಲ್ ಅಧಿಕಾರಿಗಳು ಮಿಧುನ್ ಚಂದ್ರನ್‌ನನ್ನು ವಶಕ್ಕೆ ಪಡೆದು ಮಹದೇವಪುರ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ಮಹದೇವಪುರ್ ಇನ್‌ಸ್ಪೆಕ್ಟರ್ ಸೇರಿ ಮೂವರು ಪೊಲೀಸ್ ಅಧಿಕಾರಿಗಳು ದುಬೈ ಪೊಲೀಸರ ಜೊತೆಗೆ ಸಂಪರ್ಕ ಸಾಧಿಸಿ ಅಬುದಾಬಿಗೆ ತೆರಳಿದ್ದರು. ನಂತರ ಅಬುದಾಬಿಯಲ್ಲಿ ಕೆಲವೊಂದು ಕಾನೂನು ಪ್ರಕ್ರಿಯೆಗಳನ್ನು ಮುಗಿಸಿ ಶುಕ್ರವಾರ ವಿಮಾನದಲ್ಲಿ ಮಿಧುನ್ ಚಂದ್ರನ್‌ನನ್ನು ಬೆಂಗಳೂರಿಗೆ ಕರೆತಂದು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದಾರೆ. ನ್ಯಾಯಾಲಯವು ಮಿದುನ್ ಚಂದ್ರನ್‌ನನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿದೆ.

ಸರ್ವೀಸ್ ರಿವಾಲ್ವರ್ ಕ್ಲೀನ್ ಮಾಡುವಾಗ ಮಹಿಳೆಗೆ ಗುಂಡೇಟು

ಲಕ್ನೋ: ಪಾಸ್‌ಪೋರ್ಟ್ ಪರಿಶೀಲನೆಗೆ ಪೊಲೀಸ್ ಠಾಣೆಗೆ ಬಂದಿದ್ದ ಮಹಿಳೆಯೊಬ್ಬಳಿಗೆ ಸಬ್ ಇನ್ಸ್ಪೆಕ್ಟರ್ ಸರ್ವೀಸ್ ರಿವಾಲ್ವಾರ್ ಗುಂಡು ಹಾರಿಸಿದ ಘಟನೆ ಉತ್ತರ ಪ್ರದೇಶದ ಅಲಿಘರ್‌ನಲ್ಲಿ ನಡೆದಿದೆ. ಘಟನೆಯ ದೃಶ್ಯಾವಳಿಗಳು ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಘಟನೆಯಲ್ಲಿ ಗಾಯಗೊಂಡ ಮಹಿಳೆಯನ್ನು ಇಶ್ರತ್ ಎಂದು ಗುರುತಿಸಲಾಗಿದೆ. ಆಕೆ ತನ್ನ ಮಗನೊಂದಿಗೆ ಠಾಣೆಗೆ ಬಂದಿದ್ದರು. ಸ್ವಲ್ಪ ಸಮಯದ ನಂತರ ಬಂದ ಪೊಲೀಸ್ ಅಧಿಕಾರಿ ಎಸ್‌ಐ ಮನೋಜ್ ಶರ್ಮಾ ಅವರಿಗೆ ಪಿಸ್ತೂಲ್ ನೀಡಿದ್ದಾರೆ. ಈ ವೇಳೆ ಸರ್ವೀಸ್ ರಿವಾಲ್ವರ್ ಕ್ಲೀನ್ ಮಾಡುತ್ತಿದ್ದಾಗ ಆಕಸ್ಮಿಕವಾಗಿ ಗುಂಡು ಸಿಡಿದಿದೆ. ಇದರಿಂದ ಮಹಿಳೆ ತಲೆಗೆ ಗಂಭೀರ ಗಾಯವಾಗಿದ್ದು, ಆಕೆ ಸ್ಥಳದಲ್ಲೇ ಕುಸಿದು ಬಿದ್ದಿದ್ದಾಳೆ. ಗಾಯಗೊಂಡ ಮಹಿಳೆಯನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಗುಂಡು ಮಹಿಳೆಯ ತಲೆಯ ಹಿಂಭಾಗಕ್ಕೆ ತಗುಲಿದೆ. ಆಕೆಯ ಸ್ಥಿತಿ ಗಂಭೀರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಎಸ್‌ಐ ಅನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಲಾಗಿದ್ದು, ಆತನ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆ.

ಘಟನೆ ಬಳಿಕ ಆತ ತಲೆಮರೆಸಿಕೊಂಡಿದ್ದು ಆತನ ಬಂಧನಕ್ಕೆ ಬಲೆ ಬೀಸಲಾಗಿದೆ.

ಜೂಜಾಡುತ್ತಿದ್ದ 9 ಜನರ ಬಂಧನ: 1 ಲಕ್ಷ ನಗದು ವಶ

ತುಮಕೂರು: ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ವಡ್ಡರಹಳ್ಳಿ ಗ್ರಾಮದ ಸಾರ್ವಜನಿಕ ಸ್ಥಳದಲ್ಲಿ ಜೂಜಾಡುತ್ತಿದ್ದ 9 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಆರೋಪಿಗಳು ಹಣವನ್ನು ಪಣವಾಗಿ ಕಟ್ಟಿಕೊಂಡು ಅಂದರ್–ಬಾಹರ್ ಇಸ್ಪೀಟ್ ಜೂಜಾಟ ಆಡುತ್ತಿರುವ ಬಗ್ಗೆ ಸಿ.ಇ.ಎನ್ ಕ್ರೈಂ ಪೊಲೀಸ್ ಠಾಣೆಯ ಪಿ.ಐ ರಾಮಕೃಷ್ಣಯ್ಯ ಸಿ.ಹೆಚ್ ಅವರಿಗೆ ಖಚಿತ ಮಾಹಿತಿ ಲಭಿಸಿತ್ತು.

ಈ ಹಿನ್ನೆಲೆಯಲ್ಲಿ ತುಮಕೂರು ಗ್ರಾಮಾಂತರ ಠಾಣೆಗೆ ದೂರು ನೀಡಿ ದಾಳಿ ಮಾಡಿದ ಪೊಲೀಸರು ಇಸ್ಪೀಟ್ ಜೂಜಾಟದಲ್ಲಿ ತೊಡಗಿದ್ದ 9 ಜನರನ್ನು ಡಿಸೆಂಬರ್ 7ರಂದು ವಶಕ್ಕೆ ಪಡೆದಿದ್ದಾರೆ.

ಜೂಜಾಟದ ಅಖಾಡದಲ್ಲಿ ತೊಡಗಿಸಿದ್ದ 1,03,280 ರೂ. ಹಾಗೂ 52 ಇಸ್ಪೀಟ್ ಎಲೆಗಳನ್ನು ಅಮಾನತ್ತು ಪಡಿಸಿಕೊಂಡಿದ್ದು, ಈ ಬಗ್ಗೆ ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ 369/2023 ಕಲಂ 87 ಕೆ.ಪಿ. ಆಕ್ಟ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಅರ್ಹ ಯುವ ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸಿ: ವೀಕ್ಷಕರ ಸೂಚನೆ

ಶಿವಮೊಗ್ಗ: ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಉತ್ತಮವಾಗಿ ನಡೆಯುತ್ತಿದೆ. ಇನ್ನೂ ಬಾಕಿ ಇರುವ ಯುವ ಮತದಾರರ ನೋಂದಣಿಯನ್ನು ಮಾಡಬೇಕೆಂದು ಮತದಾರರ ಪಟ್ಟಿ ವೀಕ್ಷಕರಾದ ಉಮಾಶಂಕರ್ ಎಸ್ ಆರ್ ತಿಳಿಸಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ 2024 ಕ್ಕೆ ಸಂಬಂಧಿಸಿದಂತೆ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಾರದರ್ಶಕವಾಗಿ, ನಿಷ್ಪಕ್ಷಪಾತವಾಗಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತದೆ. ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಈ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳು ಪ್ರಮುಖ ಪಾತ್ರವಹಿಸುತ್ತವೆ. ರಾಜಕೀಯ ಪಕ್ಷಗಳ ತೊಡಗಿಕೊಳ್ಳುವಿಕೆ, ಅವರು ನೀಡುವ ಇನ್ಪುಟ್ಸ್ ಮುಖ್ಯವಾಗುತ್ತದೆ. ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಚೆನ್ನಾಗಿ ಆಗಿದೆ.

ಹಾಗೂ ಸ್ವೀಪ್ ಚಟುವಟಿಕೆಗಳ ಮೂಲಕ ಅರಿವು ಮೂಡಿಸಲಾಗಿದೆ.

ಆದರೆ 18, 19 ವರ್ಷದ ಯುವ ಮತದಾರರ ನೋಂದಣಿ ಸ್ವಲ್ಪ ಬಾಕಿ ಇದೆ. ಇನ್ನೂ 3 ರಿಂದ 4 ಸಾವಿರ ಯುವ ಮತದಾರರ ನೋಂದಣಿ ಬಾಕಿ ಇದ್ದು ರಾಜಕೀಯ ಪಕ್ಷಗಳ ಸಹಕಾರದೊಂದಿಗೆ ನೋಂದಣಿ ಆಗಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಒಂದು ನಿರಂತರ ಪ್ರಕ್ರಿಯೆ ಆಗಿದ್ದು, ಯುವ ಮತದಾರರು ಸೇರಿದಂತೆ ಜನತೆ ಅರ್ಜಿ ನೀಡಿ ನೋಂದಣಿ ಮಾಡಿಕೊಳ್ಳಬೇಕು.

ನಮೂನೆ, 6, 7 ಮತ್ತು 8 ಅರ್ಜಿಗಳು ಆನ್ಲೈನ್, ಆಫ್ಲೈನ್ನಲ್ಲಿ ಬಂದಿದ್ದು ಅಪ್ಡೇಟ್ ಆಗುತ್ತಿವೆ. ಹೆಚ್ಚು ಬಾಕಿ ಇರುವುದಿಲ್ಲ. 2–3 ಮತದಾರರ ಕಾರ್ಡನ್ನು ಹೊಂದುವುದು ಅಪರಾಧವಾಗುತ್ತದೆ. ಆದ್ದರಿಂದ ಹೆಚ್ಚು ಕಾರ್ಡ್ ಹೊಂದಿರುವವರು ಸ್ವತಃ ಅದನ್ನು ರದ್ದುಪಡಿಸಿ ಒಂದೇ ಕಾರ್ಡನ್ನು ಹೊಂದಬೇಕು. ಪ್ರತಿ ಮತದಾರರನ್ನು ಗಮನಸಲಾಗುತ್ತಿರುತ್ತದೆ. ಆದ್ದರಿಂದ ಒಂದೇ ಕಾರ್ಡ್ ಇರಬೇಕು. ಮರಣ ಹೊಂದಿದವರ ಹೆಸರನ್ನು ತೆಗೆಸಿಹಾಕಬೇಕು ಹಾಗೂ ವರ್ಗಾವಣೆ, ಸ್ಥಳ ಬದಲಾವಣೆ ಇತರೆ ತಿದ್ದುಪಡಿಗಳನ್ನು ಮಾಡಿಸಿಕೊಳ್ಳಬೇಕೆಂದರು.

ರಾಜಕೀಯ ಪಕ್ಷದ ಅಭ್ಯರ್ಥಿಗಳು ಮಾತನಾಡಿ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಉತ್ತಮವಾಗಿ ನಡೆಯುತ್ತಿದೆ.

ಯುವ ಮತದಾರರ ನೋಂದಣಿ ಹೆಚ್ಚಾಗಬೇಕು ಹಾಗೂ ಮತದಾನ ಪ್ರಮಾಣ ಹೆಚ್ಚಲು ಕ್ರಮ ವಹಿಸಬೇಕೆಂದು ಕೋರಿದರು.

ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್ ಮಾತನಾಡಿ, ಪ್ರಸಕ್ತ ಪರಿಷ್ಕರಣೆ ವೇಳೆ ಸುಮಾರು 27 ಸಾವಿರ ಯುವ ಮತದಾರರು ನೋಂದಣಿಯಾಗಿದ್ದು ಇನ್ನು 3 ರಿಂದ 3500 ಯುವ ಮತದಾರರು ನೋಂದಣಿಗೆ ಬಾಕಿ ಇದ್ದು, ಅರ್ಜಿ ಸ್ವೀಕರಿಸಲಾಗುತ್ತಿದೆ.

ಕಳೆದ ವಾರದಲ್ಲೇ 5527 ಯುವ ಮತದಾರರ ಸೇರ್ಪಡೆ ಆಗಿದೆ. 32 ಸಾವಿರ ಎಪಿಕ್ ಕಾರ್ಡ್ಗಳು ಅಂಚೆ ವಿಳಾಸಕ್ಕೆ ರವಾನೆಯಾಗಿದೆ. ಹೊಸದಾಗಿ ಅರ್ಜಿ ಹಾಕಿದವರದ್ದು ಜನವರಿ 1 ರಿಂದ ರವಾನೆಯಾಗುತ್ತದೆ.

ಶೇಕಡವಾರು ಮತದಾನ ಕಡಿಮೆ ಆಗಲು ಕಾರಣ ಎರಡೆರಡು ಕಡೆ ಹೆಸರು ಇರುವುದು ಹಾಗೂ ಮರಣ ಹೊಂದಿದವರ ಹೆಸರುಗಳು ಪಟ್ಟಿಯಲ್ಲಿ ಇರುವುದಾಗಿದೆ. ಎರಡು ಕಡೆ ಇರುವದನ್ನು ರದ್ದುಪಡಿಸುವ ಅಭಿಯಾನ ಜಾರಿಯಲ್ಲಿದೆ. ಜಿಲ್ಲೆಯಲ್ಲಿ ಪ್ರತಿ ವರ್ಷ 19 ಸಾವಿರ ಮರಣ ಸಂಭವ ಆಗುತ್ತದೆ. ಇದಕ್ಕೆ ತಕ್ಕನಾಗಿ ಹೆಸರನ್ನು ತೆಗೆದು ಹಾಕುವ ಕೆಲಸ ಆಗಬೇಕು. ಕಳೆದ ಬಾರಿ 6 ಸಾವಿರ ಅಂತರವಿತ್ತು, ಈ ಬಾರಿ 3 ಸಾವಿರಕ್ಕೆ ಇಳಿದಿದ್ದು, ಮರಣ ಹೊಂದಿದವರನ್ನು ಗುರುತಿಸಿ, ಹೆಸರು ತೆಗೆದುಹಾಕಲು ರಾಜಕೀಯ ಪಕ್ಷಗಳ ಏಜೆಂಟರ್ ಸಹಕರಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯಲ್ಲಿ 7 ಮತ ಕ್ಷೇತ್ರಗಳು, 1793 ಮತಗಟ್ಟೆಗಳಿದ್ದು, ದಿ: 05–01–2024 ಕ್ಕೆ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಪ್ರಸ್ತುತ ಮತದಾರರ ಪಟ್ಟಿಯಲ್ಲಿ 728661 ಪುರುಷ, 744779 ಮಹಿಳೆ ಸೇರಿದಂತೆ ಒಟ್ಟು 1473440 ಮತದಾರರು ಇದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಜಿ.ಪಂ ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ, ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ, ರಾಜಕೀಯ ಪಕ್ಷಗಳಾದ ಕಾಂಗ್ರೆಸ್ಸ ಚಂದನ್, ಬಿಜೆಪಿ ಪಕ್ಷ ಕೆ.ಎಸ್. ದೇವರಾಜ್, ಬಿಎಸ್ಪಿ ಪಕ್ಷದ ಮಂಜುನಾಥ್, ಜೆಡಿಎಸ್ನ ನಿಖಿಲ್ ಎಸ್ ಸೇರಿದಂತೆ ಅಧಿಕಾರಿಗಳು ಇದ್ದರು.

ಇಂಡಿಯಾ ಶೆಲ್ಟರ್ ಫೈನಾನ್ಸ್ ಕಾರ್ಪೊರೇಷನ್ ಲಿಮಿಟೆಡ್ ಐಪಿಓ

ಹುಬ್ಬಳ್ಳಿ: ಇಂಡಿಯಾ ಶೆಲ್ಟರ್ ಫೈನಾನ್ಸ್ ಕಾರ್ಪೊರೇಷನ್ ಲಿಮಿಟೆಡ್, ಸೆಪ್ಟೆಂಬರ್ 30, 2023ರ ಪ್ರಕಾರ 203 ಶಾಖೆಗಳನ್ನು ಒಳಗೊಂಡಿರುವ, ವ್ಯಾಪಕ ವಿತರಣಾ ಜಾಲ ಹೊಂದಿರುವ, ಕೈಗೆಟುಕುವ ಹೌಸಿಂಗ್ ಫೈನಾನ್ಸ್ ಕಂಪನಿ ಆಗಿದೆ ಮತ್ತು ವ್ಯಾಪಾರ ಕಾರ್ಯಾಚರಣೆಗಳಲ್ಲಿ ಪ್ರಮುಖ ತಂತ್ರಜ್ಞಾನ ಮೂಲಸೌಕರ್ಯ ಬಳಸುತ್ತದೆ. ಕಂಪನಿ ಡಿಸೆಂಬರ್ 13 ರಂದು ಈಕ್ವಿಟಿ ಷೇರುಗಳ ಇನಿಷಿಯಲ್ ಪಬ್ಲಿಕ್ ಆಫರ್ಗೆ ಸಂಬಂಧಿಸಿದಂತೆ ಅದರ ಆಫರ್ ತೆರೆಯಲಿದೆ.

ರೂ. 1200 ಕೋಟಿವರೆಗೆ ಒಟ್ಟು ರೂ. 5ರ ಮುಖಬೆಲೆಯ ಈಕ್ವಿಟಿ ಷೇರುಗಳ ಒಟ್ಟು ಆಫರ್ ಗಾತ್ರವು ರೂ. 800 ಕೋಟಿವರೆಗಿನ ತಾಜಾ ಬಂಡವಾಳ ಪತ್ರಗಳ ನೀಡುವಿಕೆಯನ್ನು ಮತ್ತು ಷೇರುದಾರರನ್ನು ಮಾರಾಟ ಮಾಡುವ ಮೂಲಕ ಒಟ್ಟು ರೂ. 400ಕೋಟಿವರೆಗಿನ ಮಾರಾಟದ ಆಫರ್ ಒಳಗೊಂಡಿದೆ.

ಆಫರ್‌ನ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ. 469 ರಿಂದ ರೂ. 493ಕ್ಕೆ ನಿಗದಿಪಡಿಸಲಾಗಿದೆ. ಕನಿಷ್ಠ 30 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 30 ಈಕ್ವಿಟಿ ಷೇರುಗಳ ಗುಣಕಗಳಲ್ಲಿ ಬಿಡ್‌ಗಳನ್ನು ಮಾಡಬಹುದು.

ಆಂಕರ್ ಹೂಡಿಕೆದಾರರ ಬಿಡ್ಡಿಂಗ್ ದಿನಾಂಕವು ಮಂಗಳವಾರ, ಡಿಸೆಂಬರ್ 12, 2023 ಆಗಿರುತ್ತದೆ. ಆಫರ್ ಡಿ. 13 ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಶುಕ್ರವಾರ, ಡಿ.15, ರಂದು ಮುಚ್ಚುತ್ತದೆ.

ಸಾಮಾನ್ಯ ಕಾರ್ಪೊರೇಟ್ ಉದ್ದೇಶಕ್ಕಾಗಿ ಬಾಕಿ ಮೊತ್ತವನ್ನು ಮತ್ತು ರೂ. 640 ಕೋಟಿ ಸಾಲ ನೀಡಲು ಭವಿಷ್ಯದ ಬಂಡವಾಳದ ಅವಶ್ಯಕತೆಗಳನ್ನು ಪೂರೈಸಲು ಈಕ್ವಿಟಿ ಷೇರುಗಳ ತಾಜಾ ವಿತರಣೆಯಿಂದ ಬಂದ ನಿವ್ವಳ ಆದಾಯವನ್ನು ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪಿಸುತ್ತದೆ.

ಮಾರಾಟದ ಆಫರ್, ಕ್ಯಾಟಲಿಸ್ಟ್ ಟ್ರಸ್ಟಿಶಿಪ್ ಲಿಮಿಟೆಡ್ (ಎಂಐಸಿಪಿ ಟ್ರಸ್ಟನ ಟ್ರಸ್ಟಿಯಾಗಿ) ರೂ. 0.2 ಮಿಲಿಯನ್‌ವರೆಗಿನ ಒಟ್ಟು ಮೊತ್ತದ ಈಕ್ವಿಟಿ ಷೇರುಗಳನ್ನು (ಎಂಐಸಿಪಿ ಟ್ರಸ್ಟನ ಟ್ರಸ್ಟಿಯಾಗಿ), ಕ್ಯಾಟಲಿಸ್ಟ್ ಟ್ರಸ್ಟಿಶಿಪ್ ಲಿಮಿಟೆಡ್‌ನಿಂದ ಒಟ್ಟು ರೂ. 171.29 ಕೋಟಿ ವರೆಗೆ (ಮಡಿಸನ್‌ನ ಇಂಡಿಯಾ ಟ್ರಸ್ಟಿಯಾಗಿ ಟ್ರಸ್ಟ್ ಫಂಡ್), ಮ್ಯಾಡಿಸನ್ ಇಂಡಿಯಾ ಆಪರ್ಚುನಿಟೀಸ್ ಖಗಿ ಮೂಲಕ ರೂ. 54.43 ಕೋಟಿವರೆಗಿನ ಒಟ್ಟುಗೂಡಿಸಿದ ಷೇರು, ಎಂಐಓ ಸ್ಟಾರ್‌ರಾಕ್‌ನಿಂದ ರೂ. 31.76 ಕೋಟಿ ಮತ್ತು ನೆಕ್ಸಸ್ ವೆಂಚರ್ಸ್ ಖಖಖ, ಲಿಮಿಟೆಡ್ ನ ಒಟ್ಟು ರೂ 5 ಕೋಟಿ 125 ಮಿಲಿಯನ್ (ಒಟ್ಟಾಗಿ, "ಹೂಡಿಕೆದಾರರು ಮಾರಾಟ ಮಾಡುವ ಷೇರುದಾರರು" ಅಥವಾ "ಮಾರಾಟ ಮಾಡುವ ಷೇರುದಾರರು") ಷೇರುಗಳನ್ನು ಒಳಗೊಂಡಿರುತ್ತದೆ.

ಈ ಈಕ್ವಿಟಿ ಷೇರುಗಳನ್ನು ಕಂಪನಿಯ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್‌ನ ಮೂಲಕ ಡಿಸೆಂಬರ್ 7, 2023ರಂದು ದೆಹಲಿ ಮತ್ತು ಹರಿಯಾಣ ಕಂಪನಿಗಳ ರಿಜಿಸ್ಟ್ರಾರ್‌ಗೆ ನವದೆಹಲಿಯಲ್ಲಿ ("ಆರ್‌ಎಜ್‌ಪಿ") ಸಲ್ಲಿಸಲಾಗಿದೆ. ಮತ್ತು ಬಿಎಸ್‌ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ.

ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್, ಸಿಟಿಗ್ರೂಪ್ ಗ್ಲೋಬಲ್ ಮಾರ್ಕೆಟ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಕೋಟಕ್ ಮಹೀಂದ್ರಾ ಕ್ಯಾಪಿಟಲ್ ಕಂಪನಿ ಲಿಮಿಟೆಡ್ ಮತ್ತು ಆಂಬಿಟ್ ಪ್ರೈವೇಟ್ ಲಿಮಿಟೆಡ್ ಈ ಆಫರ್‌ನ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

ತುಮಕೂರು: ಈರುಳ್ಳಿ ಲಾರಿ ಅಪಘಾತ: ಸ್ಥಳದಲ್ಲೇ ಇಬ್ಬರು ಸಾವು

ತುಮಕೂರು: ತುಮಕೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಶನಿವಾರ ಬೆಳಗ್ಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಟೆಂಪೊ ಚಾಲಕ ಮತ್ತು ಮಾಲೀಕ ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದ

ಪಶು ಸಂಗೋಪನಾ ಇಲಾಖೆ: ಮುಚ್ಚಂಡಿ ಗ್ರಾಮದಲ್ಲಿ ಹೊಸ ಪಶು ಚಿಕಿತ್ಸಾಲಯ

ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ: ಸಚಿವ ಸತೀಶ ಜಾರಕಿಹೊಳಿ

ಬೆಳಗಾವಿ: ಮುಚ್ಚಂಡಿ ಗ್ರಾಮದಲ್ಲಿ ಸುಮಾರು 5 ವರ್ಷಗಳಿಂದ ಪಶು ಚಿಕಿತ್ಸಾಲಯದ ಅಗತ್ಯವಿದ್ದು, ಜನರ ಬೇಡಿಕೆಯಂತೆ ಜಾನುವಾರುಗಳ ಚಿಕಿತ್ಸೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಹೊಸ ಪಶು ಚಿಕಿತ್ಸಾಲಯ ಪ್ರಾರಂಭಿಸಲಾಗಿದೆ. ಇದರ ಜೊತೆಗೆ ಸಾರ್ವಜನಿಕರು ಪಶು ಸಂಗೋಪನಾ ಇಲಾಖೆಯ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಶನಿವಾರ (ಡಿ.09) ನಡೆದ ಬೆಳಗಾವಿ ತಾಲೂಕಿನ ಮುಚ್ಚಂಡಿ ಗ್ರಾಮಕ್ಕೆ ಸ್ಥಳಾಂತರಗೊಂಡ ಹೊಸ ಪಶು ಚಿಕಿತ್ಸಾಲಯ ಉದ್ಘಾಟನೆ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಚೆಕ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಗರದಿಂದ ಮುಚ್ಚಂಡಿ ಗ್ರಾಮಕ್ಕೆ ಪಶು ಚಿಕಿತ್ಸಾಲಯ ಸುತ್ತಮುತ್ತಲಿನ ಜನರಿಗೆ ಅನುಕೂಲವಾಗಲಿದೆ.

ಬೆಳಗಾವಿಯ ತಾಲೂಕಿನ ಕಲಕಾಂಬಾ, ಮುಚ್ಚಂಡಿ, ಅಷ್ಟೆ ಸೇರಿದಂತೆ ಮೂರು ಗ್ರಾಮಗಳಿಗೆ ಹಾಗೂ ನಗರ ಪ್ರದೇಶದ ಮೂರು ವಾರ್ಡ್ ಗಳ ಒಟ್ಟು 5200 ಜಾನುವಾರುಗಳಿಗೆ ಮಹಾಂತೇಶ ನಗರದಲ್ಲಿರುವ ಪಶು ಚಿಕಿತ್ಸಾಲಯವು ಹಾಗೂ ರೈತರಿಗೆ ಸೇವೆ ಸಲ್ಲಿಸುತ್ತಾ ಬಂದಿದೆ.

ಅದೇ ಆವರಣದಲ್ಲಿ ಸುಸಜ್ಜಿತ ಸ್ಪೆಷಾಲಿಟಿ ಪಶುವೈದ್ಯಕೀಯ ಆಸ್ಪತ್ರೆ ಈಗಾಗಲೇ ಕಾರ್ಯಾರಂಭಗೊಂಡಿದ್ದು, ಒಂದೇ ಸ್ಥಳದಲ್ಲಿ ಎರಡು ಪಶು ವೈದ್ಯಕೀಯ ಆಸ್ಪತ್ರೆಗಳು ಕಾರ್ಯ ನಿರ್ವಹಿಸುತ್ತಿದ್ದರಿಂದ ಹಾಗೂ ಸುತ್ತಮುತ್ತಲಿನ 5 ಗ್ರಾಮಗಳ ರೈತಾಪಿ ಜನರ ಬೇಡಿಕೆಯಂತೆ ನಗರದ ಪಶು ಚಿಕಿತ್ಸಾಲಯವನ್ನು ಮುಚ್ಚಂಡಿ ಗ್ರಾಮಕ್ಕೆ ಹುದ್ದೆಗಳ ಸಮೇತ ಸ್ಥಳಾಂತರ ಗೊಳಿಸಲಾಗಿರುತ್ತದೆ.

ಇದರಿಂದ ಸಾರ್ವಜನಿಕರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಚರ್ಮಗಂಟು ರೋಗ ಪರಿಹಾರ ಧನ ವಿತರಣೆ:

2022-23ನೇ ಸಾಲಿನಲ್ಲಿ "ಚರ್ಮಗಂಟು ರೋಗ" ದಿಂದ ಮರಣ ಹೊಂದಿದ ರಾಸುಗಳಲ್ಲಿ ಪರಿಹಾರ ಧನ ವಿತರಿಸದೇ ಬಾಕಿ ಉಳಿದ 1372 ರಾಸುಗಳಿಗೆ ಸುಮಾರು 3 ಕೋಟಿ 6 ಲಕ್ಷ

ಪರಿಹಾರ ಧನವನ್ನು ವಿತರಿಸಲಾಗಿದೆ ಎಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ. ರಾಜೀವ ಕೂಲೇರ್ ಅವರು ಹೇಳಿದರು.

ಅದೇ ರೀತಿಯಲ್ಲಿ ಮುಖ್ಯಮಂತ್ರಿಗಳ ಆಯವ್ಯಯದಲ್ಲಿ ಸೆಪ್ಟಂಬರ್ ತಿಂಗಳಿನಲ್ಲಿ ಘೋಷಣೆಯಾದಂತೆ 2022-23ನೇ ಸಾಲಿನಲ್ಲಿ ಜಾನುವಾರುಗಳ ಆಕಸ್ಮಿಕ ಸಾವಿನ ಸಂದರ್ಭದಲ್ಲಿ ರೈತರ ಸಂಕಷ್ಟ ನಿವಾರಣೆಗೆ "ಅನುಗ್ರಹ ಯೋಜನೆಯಡಿಯಲ್ಲಿ" ಮರಣ ಹೊಂದಿದ ಪ್ರತಿ ರಾಸುವಿಗೆ 10 ಸಾವಿರದಂತೆ 559 ರಾಸುಗಳ ಮಾಲೀಕರಿಗೆ 55 ಲಕ್ಷ 90 ಸಾವಿರ ಪರಿಹಾರ ಧನ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ ಎಂದು ವಿವರಿಸಿದರು.

ವಿವಿಧ ಯೋಜನೆಗಳಡಿ ಸಹಾಯಧನ ಬಿಡುಗಡೆ:

ಮುಖ್ಯಮಂತ್ರಿ ಅಮೃತ್ ಜೀವನ್ ಯೋಜನೆಯಡಿ ಹೈನುಗಾರಿಕೆ ಘಟಕ ಅನುಷ್ಠಾನಗೊಳಿಸಲು ಜಿಲ್ಲೆಯ 245 ಫಲಾನುಭವಿಗಳಿಗೆ ಸುಮಾರು 31 ಲಕ್ಷ 93 ಸಾವಿರ ಸಹಾಯಧನವನ್ನು ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.

ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಜಿಲ್ಲೆಯ 49 ಫಲಾನುಭವಿಗಳಿಗೆ 28 ಲಕ್ಷ 67 ಸಾವಿರ ಸಹಾಯಧನ ಹಾಗೂ ಗಿರಿಜನ ಉಪಯೋಜನೆಯಡಿ ಜಿಲ್ಲೆಯ ಸುಮಾರು 61 ಫಲಾನುಭವಿಗಳಿಗೆ 35 ಲಕ್ಷ 68 ಸಾವಿರ ಸಹಾಯಧನವನ್ನು ಪ್ರಸಕ್ತ ಸಾಲಿನಲ್ಲಿ ಬಿಡುಗಡೆಗೊಳಿಸಲಾಗಿದೆ ಎಂದು ಹೇಳಿದರು.

ಹೈನುಗಾರಿಕೆಯಲ್ಲಿ ಆದಾಯ ಹೆಚ್ಚಿಸಲು ವೈಜ್ಞಾನಿಕ ಪದ್ಧತಿ ಅಳವಡಿಕೆ:

ಪಶು ಸಂಗೋಪನೆಯಲ್ಲಿ ವೈಜ್ಞಾನಿಕ ತಾಂತ್ರಿಕತೆಯ ಪರಿಚಯಿಸುವ ನಿಟ್ಟಿನಲ್ಲಿ ಹೈನುಗಾರಿಕೆಯನ್ನು ಹೆಚ್ಚಿನ ಲಾಭದಾಯಕವಾಗಿಸಲು ಹಾಗೂ ಹೈನುಗಾರಿಕೆಯಲ್ಲಿ ತೊಡಗಿರುವ ರೈತರ ಆದಾಯವನ್ನು ದ್ವಿಗುಣಗೊಳಿಸಲು ವಿದ್ಯುತ್ ಚಾಲಿತ ಮೇವು ಕತ್ತರಿಸುವ ಯಂತ್ರ, ಜಾನುವಾರುಗಳಿಗೆ ಗೊಬ್ಬರ ನೆಲಹಾಸು, ರಸ ಮೇವು ಬ್ಯಾಗ್, ಡಿಜಿಟಲ್ ಕೃತಕ ಗರ್ಭಧಾರಣೆ ಯಂತ್ರ, ಜಾನುವಾರುಗಳ ತೂಕ ಅಳತೆ ಮಾಡುವ ಪಟ್ಟಿ ಸೇರಿದಂತೆ ವಿವಿಧ ವೈಜ್ಞಾನಿಕ ತಾಂತ್ರಿಕತೆಯನ್ನು ಪಶು ಸಂಗೋಪನಾ ಇಲಾಖೆ ಪರಿಚಯಿಸಿದೆ ಎಂದು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ. ರಾಜೀವ ಕೂಲೇರ್ ಅವರು ವಿವರಿಸಿದರು.

ಅನುಗ್ರಹ ಯೋಜನೆಯಡಿ ಫಲಾನುಭವಿಗಳಿಗೆ ಚೆಕ್ ವಿತರಣೆ:

ಇದೇ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ವಿವಿಧ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಚೆಕ್ ವಿತರಣೆ ಮಾಡಿದರು.

ಗ್ರಾಮ ಪಂಚಾಯತಿ ಅಧ್ಯಕ್ಷ ಲಕ್ಷ್ಮಣ ಕೆಂಚಪ್ಪ ಬುಡ್ರಿ , ಸದಸ್ಯರಾದ ಸಂದೀಪ ಜಕಾನೆ, ಮನೋಹರ ಹುಕ್ಕೆರಿಕರ, ಪಶು ಸಂಗೋಪನಾ ಇಲಾಖೆಯ ಬೆಳಗಾವಿ ತಾಲೂಕು ಸಹಾಯಕ ನಿರ್ದೇಶಕ ಡಾ. ಆನಂದ ಪಾಟೀಲ, ಪಶು ವೈದ್ಯರಾದ ಡಾ. ರೆಹಮದುಲ್ಲ, ಡಾ. ಹನ್ನುರಕರ, ಡಾ. ವಿಠ್ಠಲ ಸಂಗನಟ್ಟಿ, ಡಾ. ಪ್ರಕಾಶಮಣಿ, ಡಾ. ಪ್ರಶಾಂತ ಕಾಂಬಳೆ, ಡಾ. ಗ್ಯಾಂಗ್ರೆಡ್ಡಿ, ಡಾ. ಪಟ್ಟಣ, ಅಸೋದೆ, ಮಾಳಗಿ, ಸಂಗೀತ, ಯಲ್ಲಪ್ಪ, ಸುರೇಶ, ರಾಘವೇಂದ್ರ, ತೌಶಿಫ್ ಉಪಸ್ಥಿತರಿದ್ದರು ಹಾಗೂ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಮಠಾಧೀಶರು ರಾಜಕಾರಣ ಮಾಡಬಾರದು: ನಿಜಗುಣಾನಂದ ಶ್ರೀ

ಧಾರವಾಡ: ಮಠಾಧೀಶರು, ಪಾದ್ರಿಗಳು ಮತ್ತು ಮೌಲ್ವಿಗಳು ರಾಜಕಾರಣ ಮಾಡಬಾರದು ಎಂದು ನಿಜಗುಣಾನಂದ ಸ್ವಾಮೀಜಿ ಅಭಿಪ್ರಾಯಪಟ್ಟರು.

ಡಿ.ಕೆ.ಶಿವಕುಮಾರ್ ಸಿಎಂ ಆಗಲಿ ಎಂದು ನೊಣವಿನಕೆರೆ ಸ್ವಾಮೀಜಿ ಹೇಳಿಕೆ ಕೊಟ್ಟ ವಿಚಾರವಾಗಿ ಬೈಲೂರು ನಿಷ್ಕಲಮಂಟಪದ ನಿಜಗುಣಾನಂದ ಸ್ವಾಮೀಜಿ ಪ್ರತಿಕ್ರಿಯೆ ಕೊಟ್ಟಿದ್ದಾರೆ. ಧಾರವಾಡದಲ್ಲಿ ಮಾತನಾಡಿರುವ ಅವರು, ಸ್ವಾಮೀಜಿಗಳು ರಾಜಕೀಯದಿಂದ ಹೊರತಾಗಿರಬೇಕು. ನಮ್ಮದೇನಿದ್ದರೂ ಧರ್ಮ, ಸಂಸ್ಕೃತಿ, ಸಂಸ್ಕಾರದ ವಿಚಾರಧಾರೆಗಳಿರಬೇಕು. ಈಗ ಎಲ್ಲ ಸಮುದಾಯಗಳು ಸಂಕೀರ್ಣದಿಂದ ಹೊರಗೆ ಬಂದಿವೆ ಎಂದರು.

ಮಠಾಧೀಶರು ರಾಜಕಾರಣದಲ್ಲಿದ್ದಾರೆ ಎಂಬ ವಿಚಾರ ಒಂದು ಕಡೆ ಆದರೆ, ಮಾಧ್ಯಮಗಳೂ ಸಹ ರಾಜಕಾರಣದ ವರ್ಗದಲ್ಲಿವೆ. ಅವುಗಳು ಕೂಡ ರಾಜಕಾರಣ ಹೊರತುಪಡಿಸಿ ನಿಂತಿಲ್ಲ. ಒಂದೊಂದು ಚಾನೆಲ್‌ಗಳು ಒಬ್ಬೊಬ್ಬ ರಾಜಕಾರಣಿಯನ್ನು ವೈಭವೀಕರಿಸಿದರೆ, ಕೆಲ ಚಾನೆಲ್‌ಗಳು ಮತ್ತು ರಾಜಕಾರಣಿಗಳನ್ನು ನಿರಾಕರಿಸುತ್ತವೆ. ಈಗ ಮಾಧ್ಯಮ ಮತ್ತು ಸ್ವಾಮೀಜಿಗಳ ಇಬ್ಬರ ಪಾತ್ರವೂ ಸೋಲುತ್ತಿದೆ. ಸಮಾಜದಲ್ಲಿ ಎಲ್ಲವೂ ಸಮತೋಲನ ತಪ್ಪಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮಠಾಧೀಶರು ರಾಜಕಾರಣದಲ್ಲಿ



ಬರಬಾರದು ಎನ್ನುವುದು ಸತ್ಯ, ಧರ್ಮ, ರಾಜಕಾರಣದಲ್ಲಿ ಪ್ರವೇಶ ಮಾಡಬಾರದು. ಕೇವಲ ಲಿಂಗಾಯತ ಸ್ವಾಮೀಜಿಗಳು ಮಾತ್ರವಲ್ಲ ಮೌಲ್ವಿ, ಪಾದ್ರಿಗಳೂ ಕೂಡ ರಾಜಕಾರಣದಲ್ಲಿ ಪ್ರವೇಶ ಆಗಬಾರದು. ಯಾವ ಧರ್ಮದ ನೇತಾರರೂ ರಾಜಕಾರಣ ಪ್ರವೇಶ ಮಾಡಬಾರದು. ರಾಜಕಾರಣಿಗಳಿಗೆ ಸ್ವಾಮೀಜಿಗಳು ಬುದ್ಧಿ ಹೇಳಬಹುದು, ಮಾರ್ಗದರ್ಶನ ಮಾಡಬಹುದು, ಒಬ್ಬ ಸ್ವಾಮೀಜಿಯನ್ನು ಬಳಸಿಕೊಳ್ಳುವಾಗ ರಾಜಕಾರಣಿಗಳು ಎಚ್ಚರಿಕೆಯಿಂದ ಇರಬೇಕು. ಅವರನ್ನು ಧಾರ್ಮಿಕ ಕಾರ್ಯಕ್ಕೆ ಮಾತ್ರವೇ ಬಳಸಿಕೊಳ್ಳಬೇಕು. ರಾಜಕಾರಣಿಗಳು ಸ್ವಾಮೀಜಿಗಳನ್ನು ಬೇರೆ ಕೆಲಸಕ್ಕೆ ಬಳಸುವಾಗ ಸ್ವಾಮೀಜಿಗಳೂ ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದರು.

ಮಠಗಳಿಗೆ ಅನುದಾನ ಬಿಡುಗಡೆ ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಪೂರ್ವದಲ್ಲಿ ಪ್ರಭು ಪರಂಪರೆ ಇತ್ತು. ಆಗ ಮಹಾರಾಜರು ಎಲ್ಲರನ್ನೂ ಸಲಹುತ್ತಿದ್ದರು. ಮಠಗಳಲ್ಲಿ ಶೈಕ್ಷಣಿಕ ಸಂಸ್ಥೆ, ಉಚಿತ ಪ್ರಸಾದ ನಿಲಯ, ಅನಾಥ ಮಕ್ಕಳು ಇರುತ್ತಾರೆ. ಸಾವಿರಾರೂ ಪುಸ್ತಕ ಪ್ರಕಟಿಸಬೇಕಿರುತ್ತದೆ. ರಾಜಾಶ್ರಯ ಕಳೆದುಕೊಂಡ ಸಂಗೀತಗಾರರಿಗೆ ಮಠಗಳೇ ಆಶ್ರಯ ಆಗಿರುತ್ತವೆ. ಅನೇಕ ಜನರಿಗೆ ಮಠಗಳು ಅವಕಾಶ ಕಲ್ಪಿಸಿಕೊಡಬೇಕಿರುತ್ತದೆ. ಮಠಗಳಿಗೆ ಬರುವ ಅನುದಾನ ಪ್ರಜಾಪ್ರಭುತ್ವದ ತೆರಿಗೆ ಹಣವೇ ಆಗಿರುತ್ತದೆ. ಆದರೂ ಸಹ ಮಠದ ಸೇವೆ ಸಂಪೂರ್ಣ ಪ್ರಜೆಗಳಿಗೆ ಸಲ್ಲುತ್ತದೆ. ಹೀಗಾಗಿ ಸರ್ಕಾರ ಅನುದಾನ ಕೊಡಬೇಕಾಗುತ್ತದೆ ಎಂದು ಹೇಳಿದರು.

ಬೆನಕನಹಳ್ಳಿಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಬೆನಕನಹಳ್ಳಿ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರೆ ಹಿನ್ನೆಲೆಯಲ್ಲಿ ಗ್ರಾಮದಾದ್ಯಂತ ಅಭಿವೃದ್ಧಿ ಕೆಲಸಗಳಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶನಿವಾರ ಭೂಮಿ ಪೂಜೆಯನ್ನು ನೆರವೇರಿಸಿದರು.

ಗ್ರಾಮದಲ್ಲಿ ಈಗಾಗಲೇ ಜಾತ್ರೆಯ ವಾತಾವರಣ ನಿರ್ಮಾಣವಾಗಿದ್ದು, ಗ್ರಾಮದ ಮುಖ್ಯ ರಸ್ತೆ, ಮರಾಠಿ ಶಾಲೆಯ ಹಿಂಬಾಗ, ಪಾಟೀಲ ಗಲ್ಲಿ, ಪುಂಡಲೀಕ್ ಕಾಲೋನಿ, ಸುಭಾಷ್ ಗಲ್ಲಿ ಮುಂತಾದ ಸ್ಥಳಗಳಲ್ಲಿ ಕಾಂಕ್ರೀಟ್ ರಸ್ತೆ ಹಾಗೂ ಗಟಾರ್ ನಿರ್ಮಾಣದ ಕಾಮಗಾರಿಗಳಿಗೆ ಭೂಮಿ ನಡೆಸಲಾಯಿತು.

ಇದೇ ವೇಳೆ, ಜಾತ್ರಾ ಮಹೋತ್ಸವದ ಕುರಿತು ಗ್ರಾಮಸ್ಥರೊಂದಿಗೆ ಸಚಿವರು ಸುಧೀರ್ಘವಾಗಿ ಚರ್ಚಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಯುವರಾಜ ಕದಂ, ಬಾಳು ದೇಸೂರಕರ್, ಮೋನಪ್ಪ ಪಾಟೀಲ, ಕಲ್ಲಪ್ಪ ದೇಸೂರಕರ್, ಮಹೇಶ ಕೋಲಕಾರ, ಮೀನಾಕ್ಷಿ ಪಾಟೀಲ, ಸಿಪಿಐ ಹಿರೇಮಠ್, ಮದನ, ಪಾಟೀಲ, ಗುತ್ತಿಗೆದಾರ ಸಚಿನ್ ಸಾಮಜಿ, ಜ್ಯೋತಿಬಾ ದೇಸೂರಕರ್, ರಘು ಖಂಡೇಕರ್, ಮೋಹನ್ ಕಾಂಬಳೆ, ದಂಡಗಲ್ಕರ್, ರಾಜೇಶ ನಾಯ್ಕ, ಗ್ರಾಮ ಪಂಚಾಯತ್ ಸದಸ್ಯರು ಹಾಗೂ ದೇವಸ್ಥಾನ ಕಮಿಟಿ ಯವರು ಉಪಸ್ಥಿತರಿದ್ದರು.

ಗ್ರಾಮೀಣಾಭಿವೃದ್ಧಿ ಆಯುಕ್ತರ ಮಿಂಚಿನ ಸಂಚಾರ

ಹುಕ್ಕೇರಿ: ತಾಲೂಕಿನ ವಿವಿಧ ಕಡೆಗಳಲ್ಲಿ ಮಿಂಚಿನ ಸಂಚಾರ ನಡೆಸಿದ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ (ಎಂಜಿಎನ್‌ಆರ್‌ಇಜಿಎ) ದ ಆಯುಕ್ತ ಪವನಕುಮಾರ ಮಾಲಪಾಟಿ ಅವರು ಉದ್ಯೋಗ ಖಾತರಿಯಡಿ ಕೈಗೆತ್ತಿಕೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ತಾಲೂಕಿನ ಹೊಸಪೇಟ, ಹೊಸೂರ ಮತ್ತು ಬಡಕುಂದ್ರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೈಕೊಂಡ ನರೇಗಾ ಯೋಜನೆಯ ಕಾಮಗಾರಿಗಳನ್ನು ವೀಕ್ಷಿಸಿದ ಆಯುಕ್ತ ಪವನಕುಮಾರ ಮಾಲಪಾಟಿ, ಹಿಡಕಲ್ ಡ್ಯಾಂ ಸಮೀಪ ಉದ್ದೇಶಿತ ವಿಜ್ಞಾನ ಪಾರ್ಕ್ ನಿರ್ಮಾಣದ ಪ್ರದೇಶವನ್ನು ಪರಿಶೀಲಿಸಿದರು.

ಹೊಸಪೇಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಿಡಕಲ್ ಡ್ಯಾಂ ಹತ್ತಿರ ಅನುಷ್ಠಾನಗೊಂಡ ಹಸಿರು ಸರೋವರ ಹಾಗೂ ಯೋಜನೆಯಡಿ ನೆಡಲಾದ 10000 ಸಸಿಗಳ ಅರಣ್ಯೀಕರಣ ಕಾಮಗಾರಿ, ಹೊಸೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಘನ ತ್ಯಾಜ್ಯ ನಿರ್ವಹಣೆ ಘಟಕ ಹಾಗೂ ಪಕ್ಕದಲ್ಲಿರುವ ಜೋಳದ ಗುಡ್ಡದ ಟ್ರೆಂಚ್ ಕಾಮಗಾರಿಗೆ ಭೇಟಿ ನೀಡಿ ಕೂಲಿಕಾರರೊಂದಿಗೆ ಸಮಾಲೋಚನೆ ನಡೆಸಿದರು.

ಇದೇ ವೇಳೆ ಕಾಮಗಾರಿ ಕಡತ, ಉದ್ಯೋಗ ಚೀಟಿ, ಎನ್‌ಎಂಆರ್ ಪರಿಶೀಲಿಸಿದರು. ಬಳಿಕ ಬಡಕುಂದ್ರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಮೃತ ಸರೋವರ ಕಾಮಗಾರಿ ವೀಕ್ಷಣೆ ಮಾಡಿ ಸಲಹೆ ಸೂಚನೆಗಳನ್ನು ನೀಡಿದರು.

ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ ಕಟ್ಟಿ, ಎಡಿಪಿಸಿ ಎನ್. ಬಸವರಾಜ, ಜಿಲ್ಲಾ ಐಇಸಿ ಸಂಯೋಜಕ ಪ್ರಮೋದ ಘೋಡೇಕರ, ತಾಂತ್ರಿಕ ಸಹಾಯಕರಾದ ದೇವನಗೌಡ ಪಾಟೀಲ, ಬಸವರಾಜ ಸಪ್ಪಡ್ಲ, ತೋಟಗಾರಿಕೆ ಸಹಾಯಕ ನಿರ್ದೇಶಕ ರಾಜಶೇಖರ ಪಾಟೀಲ, ಸಾಮಾಜಿಕ ವಲಯ ಅರಣ್ಯ ಅಧಿಕಾರಿ ಮಹಾಂತೇಶ ಸಜ್ಜನ, ಉದ್ಯೋಗ ಖಾತರಿ ಸಹಾಯಕ ನಿರ್ದೇಶಕ ಲಕ್ಷ್ಮಿನಾರಾಯಣ, ಪಿಡಿಓಗಳಾದ ಮಲ್ಲಿಕಾರ್ಜುನ ಗುಡಸಿ, ಲಲೀತಾ ಶಿರಹಟ್ಟಿ, ತಾಂತ್ರಿಕ ಸಂಯೋಜಕ ಅರ್ಷದ ನೇರ್ಲಿ, ಮಹಾಂತೇಶ ಬಾದವಾನಮಠ, ಬಿಎಫ್‌ಟಿ, ಕಾಯಕ ಮಿತ್ರ-ಬಂಧು ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

ಟ್ರ್ಯಾಕ್ಟರ್-ಆಂಬ್ಯುಲೆನ್ಸ್ ಡಿಕ್ಕಿ: ಗರ್ಭಿಣಿ ಹೊಟ್ಟೆಯಲ್ಲೇ ಮಗು ಸಾವು

ವಿಜಯಪುರ: ಜೀವ ಉಳಿಸಬೇಕಾದ ಆಂಬ್ಯುಲೆನ್ಸ್ ಆಕ್ಸಿಡೆಂಟ್ ಆಗಿ ತುಂಬು ಗರ್ಭಿಣಿ ಹಾಗೂ ಇನ್ನೂ ಕಣ್ಣು ಬಿಟ್ಟು ನೋಡದ ಹೊಟ್ಟೆಯಲ್ಲಿದ್ದ ಮಗು ಸಾವನ್ನಪ್ಪಿರೋ ದಾರುಣ ಘಟನೆ ತಾಳಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಭಾಗ್ಯಶ್ರೀ ಪರಣ್ಣನವರ(20) ಮೃತಪಟ್ಟಿರುವ ಗರ್ಭಿಣಿ. ಮೊದಲ ಹೆರಿಗೆಗಾಗಿ ತವರು ಮನೆಗೆ ತೆರಳಿದ್ದ ಭಾಗ್ಯಶ್ರೀಗೆ ಹೆರಿಗೆ ನೋವು ಕಾಣಿಸಿಕೊಂಡಿದೆ. ಹೆರಿಗೆ ನೋವಿನ ಹಿನ್ನೆಲೆಯಲ್ಲಿ ಭಾಗ್ಯಶ್ರೀಯನ್ನು ತಾಳಿಕೋಟೆ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಭಾಗ್ಯಶ್ರೀ ಆರೋಗ್ಯದಲ್ಲಿ ಏರುಪೇರಾದ ಕಾರಣ ಗರ್ಭಿಣಿಯನ್ನು ಜಿಲ್ಲಾಸ್ಪತ್ರೆಗೆ ರವಾನಿಸಲಾಗುತ್ತಿತ್ತು. ಜಿಲ್ಲಾಸ್ಪತ್ರೆಗೆ ಹೋಗುವ ಮಾರ್ಗ ಮಧ್ಯೆ ಜೀವ ಉಳಿಸಬೇಕಾದ ಆಂಬ್ಯುಲೆನ್ಸ್ ನಿಂತಿದ್ದ ಟ್ರ್ಯಾಕ್ಟರ್‌ಗೆ ಗುದ್ದಿದೆ. ಕಬ್ಬು ತುಂಬಿದ ಟ್ರ್ಯಾಕ್ಟರ್‌ಗೆ ಗುದ್ದಿದ ಪರಿಣಾಮ ಆಂಬ್ಯುಲೆನ್ಸ್‌ನಲ್ಲಿದ್ದ ತುಂಬು ಗರ್ಭಿಣಿ ಸಾವನ್ನಪ್ಪಿದ್ದಾರೆ.

ಆಂಬ್ಯುಲೆನ್ಸ್‌ನಲ್ಲಿದ್ದ ಇಬ್ಬರು ಸ್ಟಾಫ್ ನರ್ಸ್ ಹಾಗೂ ಓರ್ವ ಸಹಾಯಕನಿಗೆ ಗಾಯಗೊಂಡಿದ್ದಾರೆ.

ಆಂಬ್ಯುಲೆನ್ಸ್ ಚಾಲಕನ ನಿರ್ಲಕ್ಷ್ಯವೇ ಆಕ್ಸಿಡೆಂಟ್‌ಗೆ ಕಾರಣ ಎಂದು ಮೃತ ಭಾಗ್ಯಶ್ರೀ ಪೋಷಕರು ಆರೋಪಿಸಿದ್ದಾರೆ. ತಾಳಿಕೋಟೆ ಸಮುದಾಯ ಆಸ್ಪತ್ರೆ ಬಳಿ ಮೃತ ಭಾಗ್ಯಶ್ರೀ ಪೋಷಕರು ಪ್ರತಿಭಟನೆ ನಡೆಸಿದ್ದು, ವೈದ್ಯಾಧಿಕಾರಿ ಮೇಲೆ ಹಲ್ಲೆಗೆ ಯತ್ನಿಸಿದ್ದಾರೆ. ಗರ್ಭಿಣಿಯನ್ನು ಜಿಲ್ಲಾಸ್ಪತ್ರೆಗೆ ರವಾನೆ ಮಾಡಿದ್ದಕ್ಕೆ ಮೃತಳ ಪೋಷಕರು ಅಸಮಾಧಾನ ವ್ಯಕ್ತಪಡಿಸಿದ್ದಾ